# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 72 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 25–09–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 72 | Title- Code: KARKAN 28269 | Chitradurga | Date: 25-09-2023 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಿಶ್ವದ ಕಲೆಯ ಶ್ರೀಮಂತಿಕೆ ಸಾಕಾರಗೊಳಿಸಿದ ಕೀರ್ತಿ ವಿಶ್ವಕರ್ಮರದ್ದು: ಶಾಸಕ ರಘುಮೂರ್ತಿ 2

ಜಾನುವಾರು ಲಸಿಕೆ ಕಾರ್ಯಕ್ರಮ ಯಶಸ್ವಿಗೊಳಿಸಿ: ಜಿಲ್ಲಾಧಿಕಾರಿ 3

ಬ್ಲಾಕ್ ಬೆಲ್ಟ್ ಕರಾಟೆ ಸ್ಪರ್ಧೆ : ಶುಭಶ್ರೀ ರಾಜ್ಯಮಟ್ಟಕ್ಕೆ ಆಯ್ಕೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನಾಳೆ ಜಿಲ್ಲಾ ಮಟ್ಟದ ವಿಶೇಷ ಚೇತನ ಮಕ್ಕಳ ಕ್ರೀಡಾಕೂಟ ಉದ್ಘಾಟನೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ 14, 17 ವರ್ಷ ವಯೋಮಿತಿಯೊಳಗಿನ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಬಾಲಕ, ಬಾಲಕಿಯರ ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ವಿಶೇಷ ಚೇತನ ಮಕ್ಕಳ ಮೇಲಾಟಗಳ ಕ್ರಿಡಾಕೂಟ ಉದ್ಘಾಟನಾ ಸಮಾರಂಭವನ್ನು ಇದೇ ಸೆಪ್ಟೆಂಬರ್ 26ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕ್ರೀಡಾಕೂಟ ಉದ್ಘಾಟಿಸುವರು. ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ. ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್ ಭಾಗವಹಿಸುವರು.ವಿಶೇಷ ಆಹ್ವಾನಿತರಾಗಿ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್‌ಜೆ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಧರ್ಮೇಂದರ್ ಕುಮಾರ್ ಮೀನಾ, ಸಿ.ಟಿ.ಇ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಸಹ ನಿರ್ದೇಶಕಿ ಟಿ.ಜಿ. ಲೀಲಾವತಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಘಟಕದ ಅಧ್ಯಕ್ಷ ಕೆ.ಟಿ. ತಿಮ್ಮಾರೆಡ್ಡಿ ಸೇರಿದಂತೆ ಗೌರವಾನ್ವಿತ ನಗರಸಭಾ ಸರ್ವ ಸದಸ್ಯರು ಭಾಗವಹಿಸುವರು.ಜಿಲ್ಲಾ ಮಟ್ಟದ ಶಾಲಾ ಮಕ್ಕಳ ಪಂದ್ಯಾವಳಿ ನಡೆಯುವ ಸ್ಥಳಗಳ ವಿವರ: ಜಿಲ್ಲಾ ಮಟ್ಟದ ಶಾಲಾ ಮಕ್ಕಳ ಪಂದ್ಯಾವಳಿಗಳು ಇದೇ ಸೆಪ್ಟೆಂಬರ್ 26 ಮತ್ತು 27 ರಂದು ಚಿತ್ರದುರ್ಗ ನಗರದ ವಿವಿಧ ಕ್ರೀಡಾಂಗಣಗಳಲ್ಲಿ ನಡೆಯಲಿದೆ. ಕ್ರೀಡಾಕೂಟದ ಉದ್ಘಾಟನಾ ಕಾರ್ಯಕ್ರಮ ಸೆ.26ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದೆ.

ಸೆ.26ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್ ಕ್ರೀಡೆ ನಡೆಯಲಿದೆ. ಸೆ.27 ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್ (ವಿಶೇಷ ಚೇತನ ಮಕ್ಕಳ) ಕ್ರೀಡಾಕೂಟ, ಸರ್ಕಾರಿ ಕಲಾ ಕಾಲೇಜು ಮೈದಾನದಲ್ಲಿ ಥ್ರೋಬಾಲ್ ಮತ್ತು ಬಾಲ್‌ಬ್ಯಾಡ್ಮಿಟನ್, ಹಳೇ ಮಾಧ್ಯಮಿಕ ಶಾಲಾ ಮೈದಾನದಲ್ಲಿ ಕಬಡ್ಡಿ ಮತ್ತು ಖೋಖೋ (ಪ್ರಾಥಮಿಕಶಾಲೆವಿಭಾಗ),ಮಹಾರಾಣಿಪ್ರೌಢಶಾಲೆ ಕೋಟೆ ಎದುರು ಖೋಖೋ (ಪ್ರೌಢಶಾಲೆ ವಿಭಾಗ ಬಾಲಕಿಯರು), ಜೋಗಿಮಟ್ಟಿ ರಸ್ತೆಯ ಶ್ರೀ ವಾಸುದೇವ ರೆಡ್ಡಿ ಸ್ಮಾರಕ ಪ್ರೌಢಶಾಲೆಯಲ್ಲಿ ಖೋಖೋ (ಬಾಲಕರ ಪ್ರೌಢಶಾಲೆ ವಿಭಾಗ) ಕ್ರೀಡೆಗಳು ನಡೆಯಲಿವೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಸೆ.30 ರವರೆಗೆ ಬೆಳಿಗ್ಗೆ 8 ರಿಂದ ರಾತ್ರಿ 8 ರವರೆಗೆ ಉಪನೋಂದಣಾಧಿಕಾರಿ ಕಚೇರಿ ಕಾರ್ಯನಿರ್ವಹಣೆ

» ಚಿತ್ರದುರ್ಗ

ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕೇಂದ್ರ ಮೌಲ್ಯ ಮಾಪನ ಸಮಿತಿಯ2023–24ನೇ ಸಾಲಿನಲ್ಲಿ ಸ್ಥಿರಾಸ್ತಿಗಳ ಮಾರುಕಟ್ಟೆ ಮೌಲ್ಯ ಮಾರ್ಗಸೂಚ ದರಗಳನ್ನು ಪರಿಷ್ಕರಣೆ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ನೋಂದಣಿಗೆ ಹಾಜರುಪಡಿಸುವ ದಸ್ತಾವೇಜುಗಳ ಸಂಖ್ಯೆ ಹೆಚ್ಚಾಗುವ ಸಾಧ್ಯತೆಗಳು ಇರುತ್ತವೆ, ಸಾರ್ವಜನಿಕ ಹಿತದೃಷ್ಟಿಯಿಂದ ರಾಜ್ಯದ ಎಲ್ಲಾ ಉಪನೋಂದಣಿ ಕಛೇರಿಗಳ ಕೆಲಸದ ಅವಧಿಯನ್ನು ಸೆ.23 ರಿಂದ ಜಾರಿಗೆ ಬರುವಂತೆ ಬೆಳಿಗ್ಗೆ 8 ಗಂಟೆಯಿಂದ ರಾತ್ರಿ 8 ಗಂಟೆವರೆಗೆ ಕಾರ್ಯ ನಿರ್ವಹಿಸಲು ಕಛೇರಿ ಅವಧಿಯನ್ನು ವಿಸ್ತರಿಸಿ ಆದೇಶಿಸಲಾಗಿದೆ. ಸೆಪ್ಟೆಂಬರ್ 23 ನಾಲ್ಕನೇ ಶನಿವಾರವದಂದೂ ಕೂಡ ಈ ಅವಧಿಯಲ್ಲಿ ಕಾರ್ಯ ನಿರ್ವಹಿಸಲಾಗುವುದು. ಈ ಕೆಲಸದ ಅವಧಿಯು ಸೆ.30 ರವರೆಗೆ ಮಾತ್ರ ಜಾರಿಯಲ್ಲಿರುತ್ತದೆ.ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದು ಕೊಳ್ಳಬಹುದು.

### ವಿಕಲಚೇತನರಿಗೆ ಉಚಿತವಾಗಿ ಸಾಧನ ಸಲಕರಣೆಗಳ ಸಮರ್ಪಣೆ

# 26 ಲಕ್ಷ ಫಲಾನುಭವಿಗಳಿಗೆ ವಿತರಣೆ

### ಸಾಮಾಜಿಕ ಅಧಿಕಾರಿತಾ ಶಿಬಿರದಲ್ಲಿ ಕೇಂದ್ರ ಸಾಮಾಜಿಕ ನ್ಯಾಯ, ಸಬಲೀಕರಣ ಸಚಿವ ಎ.ನಾರಾಯಣಸ್ವಾಮಿ

» ಚಿತ್ರದುರ್ಗ






ವಿಕಲಚೇತನರ ಸಬಲೀಕರಣಕ್ಕಾಗಿ ಕಳೆದ 9 ವರ್ಷಗಳಲ್ಲಿ 14,174 ಮೌಲ್ಯಮಾಪನ ಶಿಬಿರ ನಡೆಸಿ, 26 ಲಕ್ಷಕ್ಕೂ ಅಧಿಕ ಅಂಗವಿಕಲ ಫಲಾನುಭವಿಗಳಿಗೆ ಅಗತ್ಯ ಸಾಧನ–ಸಲಕರಣೆಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.

ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಭಾನುವಾರ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆ (ದಿವ್ಯಾಂಗಜನ್), ಕೃತಕ ಅಂಗಾಂಗ ತಯಾರಿಕಾ ಕಾರ್ಪೋರೇಷನ್ ಆಫ್ ಇಂಡಿಯಾ (ಅಲಿಂಕೋ), ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಹಯೋಗದೊಂದಿಗೆ ಸಾಮಾಜಿಕ ಅಧಿಕಾರಿತಾ ಶಿಬಿರ–ಕೇಂದ್ರ ಸರ್ಕಾರದ ವಿಶೇಷ ಅಡಿಪ್ ಯೋಜನೆಯಡಿ ವಿಕಲಚೇತನರಿಗೆ ಉಚಿತವಾಗಿ ಸಾಧನ ಸಲಕರಣೆಗಳ ಸಮರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಗವಿಕಲರು ಸಮಾಜದಲ್ಲಿ ಎಲ್ಲರಂತೆ ಬದುಕಲಿ ಎಂಬ ದೃಷ್ಟಿಯಿಂದ ಶಸ್ತ್ರಚಿಕಿತ್ಸೆ, ಸ್ಕಾಲರ್‌ಶಿಪ್, ಸಾಧನ–ಸಲಕರಣೆ, ಕೌಶಲ ತರಬೇತಿ, ಸಾಲ ಸೌಲಭ್ಯ ಸೇರಿ ಇತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಅವುಗಳನ್ನು ಪ್ರಾಮಾಣಿಕವಾಗಿ ತಲುಪಿಸಲು ಸಿದ್ಧನಿದ್ದೇನೆ. ನಿಮ್ಮ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಲಿದ್ದೇನೆ ಎಂದು ಭರವಸೆ ನೀಡಿದರು.

ವೈಜ್ಞಾನಿಕವಾಗಿ ಭಾರತ ಸಾಕಷ್ಟು ಮುಂದುವರೆದಿದ್ದು, ಹೊಸ ದಿಕ್ಕಿನಲ್ಲಿ ಸಾಗುತ್ತಿದೆ. ಯಾವ ದೇವರ ಶಾಪದಿಂದಲೂ ಅಂಗವಿಕಲರಾಗಿ ಜನಿಸುವುದಿಲ್ಲ. ಪಾಲಕರ ಕೆಲ ಸಣ್ಣ–ಪುಟ್ಟ ತಪ್ಪುಗಳಿಂದ, ಕೆಲವು ಸಲ ವೈದ್ಯರ ನಿರ್ಲಕ್ಷ್ಯದಿಂದಾಗಿ ಅಂಗವಿಕಲತೆ ಉಂಟಾದರೂ ಅದಕ್ಕೆ ತ್ವರಿತವಾಗಿ ಶಸ್ತ್ರಚಿಕಿತ್ಸೆ ಮೂಲಕ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ. ಮೂಢನಂಬಿಕೆಯಿಂದ ಮೊದಲು ಹೊರಬನ್ನಿ. ನಿಮ್ಮ ಬದುಕು–ಭವಿಷ್ಯ ರೂಪಿಸಿಕೊಳ್ಳಲು ದೃಢ ಸಂಕಲ್ಪ ಮಾಡಿ. ಸರ್ಕಾರ ನೀಡುವ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಈಚೆಗೆ ಜಾರಿಗೊಳಿಸಿದ ವಿಶ್ವಕರ್ಮ ಯೋಜನೆ ದೇಶದಲ್ಲೇ ಅತ್ಯುತ್ತಮ ಯೋಜನೆ. ಕುಲಕಸುಬುಗಳಲ್ಲಿ ತೊಡಗುವವರು ಗ್ರಾಮ ಪಂಚಾಯಿತಿ ವತಿಯಿಂದ ದೃಢೀಕರಣ ಪತ್ರ ಪಡೆದು, ಜಿಲ್ಲಾಡಳಿತ ಫಲಾನುಭವಿ ಗುರುತಿಸಿದರೆ, 5 ದಿನದ ಕೌಶಲ ತರಬೇತಿ ನೀಡುವುದರ ಜೊತೆಗೆ ಆರ್ಥಿಕವಾಗಿ ಒಂದಿಷ್ಟು ನೆರವು ನೀಡಲಾಗುವುದು ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರು ಕೆಂಪು ಕೋಟೆಯಲ್ಲಿ ಘೋಷಿಸುವ ಯೋಜನೆಗಳನ್ನು ಜಾರಿಗೊಳಿಸಲು ಅಧಿಕಾರಿಗಳು ಮುಂದಾಗಬೇಕು. ಕಚೇರಿಯ ನಾಲ್ಕು ಗೋಡೆಗಳಿಗೆ ಸೀಮಿತವಾಗಬಾರದು. ಸೌಲಭ್ಯ ತಲುಪಿಸದ ಅಧಿಕಾರಿಗಳನ್ನು ಕ್ಷಮಿಸಲಾರೆ ಎಂದರು.

ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಮಾತನಾಡಿ, ಕೇಂದ್ರ ಸರ್ಕಾರ ವಿಕಲಚೇತನರ ಸಬಲೀಕರಣಕ್ಕಾಗಿ, ಅವರು ಯಾವುದೇ ರೀತಿಯಾದ ಅಂಗಾಂಗ ನ್ಯೂನತೆಯಿಂದ, ದಿನನಿತ್ಯದ ಬದುಕಿನಲ್ಲಿ ಅವರಿಗೆ ಕೊರತೆಯಾಗದಿರಲು ದಿವ್ಯಾಂಗದರಿಗೆ ಆರೋಗ್ಯ ತಪಾಸಣಾ ಶಿಬಿರ ಆಯೋಜನೆ ಮಾಡಿ, ಸಾಧನ ಸಲಕರಣೆಗಳ ವಿತರಣೆ ಮಾಡಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ದಿವ್ಯಾಂಗರಿಗೆ ಹೆಚ್ಚಿನ ಒತ್ತು ಕೊಡುವ ಮೂಲಕ ದಿವ್ಯಾಂಗರಿಗೆ ಚೈತನ್ಯ ತುಂಬುವ ಕೆಲಸ ಮಾಡುತ್ತಿದ್ದಾರೆ ಎಂದರು.

ದಿವ್ಯಾಂಗರು ಸಾಧನ–ಸಲಕರಣೆಗಳನ್ನು ಪಡೆದುಕೊಂಡು ತಮ್ಮ ಬದುಕನ್ನು ಮತ್ತಷ್ಟು ಗಟ್ಟಿಯಾಗಿ, ಆತ್ಮಸ್ಥೈರ್ಯ, ಆತ್ಮವಿಶ್ವಾಸದಿಂದ ಎಲ್ಲರಂತೆ ಬದುಕನ್ನು ನಡೆಸಬೇಕು ಎಂದು ಹೇಳಿದರು.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಜಂಟಿ ಕಾರ್ಯದರ್ಶಿ ರಾಜೀವ್ ಶರ್ಮ ಮಾತನಾಡಿ, ವಿಶೇಷಚೇತನರ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ವಿಶೇಷ ಕಾಳಜಿ ಹೊಂದಿದ್ದಾರೆ. ವಿಶೇಷಚೇತನರಿಗೆ ಸಾಧನ ಸಲಕರಣೆ, ಅನೇಕ ಯೋಜನೆಗಳನ್ನು ಜಾರಿಗೊಳಿಸಿ, ಅವರನ್ನು ಕೂಡ ಮುಖ್ಯವಾಹಿನಿಗೆ ತರುವನಿಟ್ಟಿನಲ್ಲಿ ಸರ್ಕಾರ ಮುಂದಾಗಿದೆ. ಎಲ್ಲರಂತೆ ಅವರ ಜೀವನ ಸುಗಮವಾಗಿ ನಡೆಯಬೇಕು ಎಂಬ ಉದ್ದೇಶ ಅಡಗಿದೆ. ಕೇಂದ್ರ ಸರ್ಕಾರದ ವಿಶೇಷ ಅಡಿಪ್ ಯೋಜನೆಯಡಿ ವಿಕಲಚೇತನರಿಗೆ ಉಚಿತವಾಗಿ ಸಾಧನ ಸಲಕರಣೆಗಳ ವಿತರಣೆ ಮಾಡಲಾಗುತ್ತಿದ್ದು, ಇದೊಂದು ಮಹತ್ವಪೂರ್ಣವಾದ ಯೋಜನೆಯಾಗಿದ್ದು, ದೇಶಾದಾದ್ಯಂತ ಹಲವರು ಇದರ ಪಡೆದಿದ್ದಾರೆ.

ಇದರಿಂದ ವಿಶೇಷ ಚೇತನರಿಗೆ ಅನುಕೂಲವಾಗಿದೆ ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ, ವಿಕಲಚೇತನರಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನೇಕ ಯೋಜನೆಗಳನ್ನು ಜಾರಿಗೊಳಿಸಿವೆ. ವಿಶ್ವದ ಇತರೆ ದೇಶಗಳಿಗೆ ಹೋಲಿಕೆ ಮಾಡಿದಾಗ ನಮ್ಮ ದೇಶದಲ್ಲಿ ಹೆಚ್ಚಿನ ಮಾನವ ಸಂಪನ್ಮೂಲ ಇದೆ.

ಪುಟ 3

## ಮೇಕದಾಟು ಅಣೆಕಟ್ಟು ಕಾವೇರಿ ಸಮಸ್ಯೆಗೆ ಪರಿಹಾರ

» ಚಿತ್ರದುರ್ಗ

ರಾಜ್ಯ ಸರ್ಕಾರ ಕಾವೇರಿ ಪ್ರಾಧಿಕಾರದ ಆದೇಶದಂತೆ ಪ್ರತಿ ವರ್ಷ 177 ಟಿಎಂಸಿ ನೀರು ತಮಿಳುನಾಡಿಗೆ ನೀಡಬೇಕು. ಆದರೆ ಕಳೆದ ವರ್ಷ 600 ಟಿಎಂಸಿ ನೀರು ವೃಥಾ ಹರಿದು ಸಮುದ್ರ ಸೇರಿದೆ. ಹೆಚ್ಚುವರಿ ನೀರು ಸಂಗ್ರಹಕ್ಕೆ ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬದ್ಧರಾಗಿದ್ದಾರೆ. ಮೇಕದಾಟು ಅಣೆಕಟ್ಟು ನಿರ್ಮಾಣವೇ ಕಾವೇರಿ ನದಿ ನೀರು ಸಮಸ್ಯೆ ಪರಿಹಾರವಾಗಲಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ



ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

ಚಿತ್ರದುರ್ಗ ಜಿಲ್ಲೆಯ ಸಿರಿಗೆರೆಯಲ್ಲಿ ಲಿಂಗೈಕ್ಯ ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳ 31ನೇ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಪುಟ 4

## ರಾಜ್ಯದಾದ್ಯಂತ ಏಕ ಕಾಲಕ್ಕೆ ಜನತಾ ದರ್ಶನಕ್ಕೆ ನಾಡು ಇಂದು ಸಾಕ್ಷಿ

ಮುಖ್ಯಮಂತ್ರಿಗಳ ಸೂಚನೆ ಮೇರೆಗೆ ನಡೆಯಲಿರುವ ಈ ಅರ್ಥಪೂರ್ಣ ಕಾರ್ಯಕ್ರಮದ ಹೊಣೆಗಾರಿಕೆ ಜಿಲ್ಲಾಧಿಕಾರಿಗಳು, ಜಿಲ್ಲಾಪಂಚಾಯ್ತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಮೇಲಿದೆ. ಜಿಲ್ಲಾ ಉಸ್ತುವಾರಿ ಸಚಿವರುಗಳ ಸಮ್ಮುಖದಲ್ಲೇ ಸಾರ್ವಜನಿಕರ ಅಹವಾಲು ಸ್ವೀಕರಿಸುವ ಮತ್ತು ಸಾಧ್ಯವಾದಷ್ಟು ಸ್ಥಳದಲ್ಲೇ ಪರಿಹಾರ ಕಂಡುಕೊಳ್ಳುವ ಕಾಳಜಿ ಈ ಜನತಾ ದರ್ಶನದ ಹಿಂದಿದೆ.

**ಸೂಚನೆಏನು?:** ಆಡಳಿತಕ್ಕೆ ಚುರುಕು ಮುಟ್ಟಿಸಿ, ಸರ್ಕಾರಿ ಯಂತ್ರಾಂಗವನ್ನು ಕ್ರಿಯಾಶೀಲಗೊಳಿಸುವ ಪ್ರಯತ್ನವಾಗಿ ನಡೆಸಿದ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾಪಂಚಾಯ್ತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹತ್ತು ದಿನಗಳ ಹಿಂದೆ ಒಂದು ಸೂಚನೆ ನೀಡಿದ್ದರು.

ಪುಟ 3

## ಪ್ರಮುಖ ಸುದ್ದಿ

# ತಿಮ್ಮಪ್ಪಯ್ಯನಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ವಾಮಚಾರ

» ಚಳ್ಳಕೆರೆ/ ನಾಯಕನಹಟ್ಟಿ





ಇತ್ತೀಚೆಗೆ ತಾನೇ ಇಸ್ರೋ ವತಿಯಿಂದ ಚಂದ್ರಯಾನ ಕೈಗೊಂಡ ಸಂತಸವನ್ನು ಇಡೀ ದೇಶ ಹಂಚಿಕೊಳ್ಳುತ್ತಿರುವ ಸಂದರ್ಭದಲ್ಲೇ ನಮ್ಮಲ್ಲಿ ಇನ್ನೂ ಮೂಢನಂಬಿಕೆ, ವಾಮಾಚಾರ ನಮ್ಮನ್ನು ಬಿಟ್ಟು ಹೋಗಿಲ್ಲ. ಕಾರಣ, ತಾಲ್ಲೂಕಿನ ತಳಕು ಹೋಬಳಿಯ ತಿಮ್ಮಪ್ಪಯ್ಯನಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಯಾರೋ ಕಿಡಿಗೇಡಿಗಳು ವಾಮಾಚಾರ ನಡೆಸುವ ಮೂಲಕ ಜನರಲ್ಲಿ ಗಾಬರಿ ಉಂಟು ಮಾಡಿರುವ ಘಟನೆ ನಡೆದಿದೆ.

ತಿಮ್ಮಪ್ಪಯ್ಯನಹಳ್ಳಿ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕರ ಕಾರ್ಯಾಲಯದ ಮುಂಭಾಗದ ಹೊಸ್ತಿಲ ಬಳಿ ನೆಲದ ಮೇಲೆ ಎರಡು ಬಿಳಿ ಮೂಳೆ ಹಾಗೂ ಬುರುಡೆ ಮೇಲೆ ಅರಿಸಿನ, ಕುಂಕುಮ, ನಿಂಬೆಹಣ್ಣು, ಎಲೆಅಡಿಕೆ, ಹೂ, ಮೊಟ್ಟೆ ಇತ್ಯಾದಿ ವಸ್ತುಗಳನ್ನು ಚೆಲ್ಲಿ ವಾಮಾಚಾರ ನಡೆಸಿದ್ದಾರೆ. ಈ ಹಿಂದೆ ಒಮ್ಮೆ ಶಾಲೆಯ ಆವರಣದಲ್ಲಿ ವಾಮಾಚಾರ ನಡೆದಿದ್ದು, ಮತ್ತೆ ಶನಿವಾರ ಬೆಳಗ್ಗೆ ಮುಖ್ಯೋಪಾಧ್ಯಾಯ ಕೊಠಡಿಯ ಮುಂಭಾಗದಲ್ಲಿ ವಾಮಾಚಾರ ನಡೆದಿದ್ದಾರೆ.

ಶನಿವಾರ ಬೆಳಗ್ಗೆ ಶಾಲೆಗೆ ವಿದ್ಯಾರ್ಥಿಗಳು ಆಗಮಿಸಿದಾಗ ವಾಮಾಚಾರ ಕಂಡು ಕೂಡಲೇ ಶಿಕ್ಷಕರಿಗೆ ಹಾಗೂ ಪೋಷಕರಿಗೆ ಮಾಹಿತಿ ನೀಡಿದ್ದಾರೆ. ಶಾಲೆಗೆ ಬಂದ ವಿದ್ಯಾರ್ಥಿಗಳು ವಾಮಾಚಾರವನ್ನು ಕಂಡು ಗಾಬರಿಯಾಗಿದ್ದಾರೆ. ವಿದ್ಯಾರ್ಥಿಗಳ ಜೊತೆಯಲ್ಲಿ ಶಿಕ್ಷಕರು, ಪೋಷಕರು ಸಹ ವಾಮಾಚಾರವನ್ನು ಕಂಡು ದಿಗ್ಭಾಂತ್ರಿಗೆ ಒಳಗಾಗಿದ್ದಾರೆ. ಗ್ರಾಮಸ್ಥರು ಸಹ ವಾಮಾಚಾರವನ್ನು ಕಂಡು ಬೇಸರಗೊಂಡರಲ್ಲದೆ, ಶಾಲೆಯ ಬಳಿಯೇ ವಾಮಾಚಾರ ನಡೆದ ಬಗ್ಗೆ ಆತಂಕವನ್ನು ವ್ಯಕ್ತಪಡಿಸಿದರು.

ಸುದ್ದಿ ತಿಳಿದ ಕೂಡಲೇ ತಳಕು ಪಿಎಸ್‌ಐಗಳಾದ ಗಾದಿಲಿಂಗಪ್ಪ, ಲೋಕೇಶ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ವಾಮಾಚಾರ ನಡೆಸಿದ ಸ್ಥಳ ಹಾಗೂ ಉಪಯೋಗಿಸಿದ ವಸ್ತುಗಳನ್ನು ಪೊಲೀಸರು ತನಿಖೆ ನಡೆಸಿ ಮುಂದಿನ ಕ್ರಮ ಜರುಗಿಸುವ ಭರವಸೆ ನೀಡಿದರು. ಪ್ರಭಾರ ಮುಖ್ಯೋಪಾಧ್ಯಾಯ ಶಿವಕುಮಾರ್ ದೂರು ನೀಡಿರುತ್ತಾರೆ. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾಹಿತಿ ನೀಡಿ, ಸುದ್ದಿ ತಿಳಿದ ಕೂಡಲೇ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು, ಪೋಷಕರು ಹಾಗೂ ಎಸ್‌ಡಿಎಂಸಿ ಸದಸ್ಯರೊಡನೆ ದೂರವಾಣಿಯಲ್ಲಿ ಚರ್ಚೆ ನಡೆಸಿ ಶಾಲೆಗೆ ಬರುವ ಎಲ್ಲಾ ವಿದ್ಯಾರ್ಥಿಗಳು ಉತ್ತಮ ವಾತಾವರಣದಲ್ಲಿ ಶಿಕ್ಷಣ ಕಲಿಯಲು ಬರುತ್ತಾರೆ. ಯಾರೋ ಕಿಡಿಗೇಡಿಗಳು ದುರುದ್ದೇಶದಿಂದ ಈ ಕೃತ್ಯ ನಡೆಸಿ ಮಕ್ಕಳ ಭವಿಷ್ಯಕ್ಕೆ ಅಡ್ಡಿಯಾಗುತ್ತಿದ್ದಾರೆ. ಆದರೆ, ಇಲಾಖೆ ಇದನ್ನು ಗಂಭೀರವಾಗಿ ಪರಿಗಣಿಸಿ ಪೊಲೀಸರಿಗೆ ದೂರು ನೀಡಿದ್ದು ವಾಮಾಚಾರ ನಡೆಸಿದವರನ್ನು ಪತ್ತೆಹಚ್ಚುವುದಾಗಿ ಪೊಲೀಸ್ ಅಧಿಕಾರಿಗಳು ಭರವಸೆ ನೀಡಿದ್ದಾರೆಂದರು. ವಿದ್ಯಾರ್ಥಿಗಳಿಗೂ ಸಹ ಧೈರ್ಯತುಂಬಿ ಎಂದಿನಂತೆ ತರಗತಿಗಳನ್ನು ನಡೆಸಲು ಸೂಚನೆ ನೀಡಲಾಗಿದೆ ಎಂದರು.

## ಫಾಸ್ಟ್ ನ್ಯೂಸ್

### ದಾವಣಗೆರೆ ತಾಲ್ಲೂಕು ಕಡ್ಲೆಬಾಳು ಗ್ರಾಮದಲ್ಲಿ ಸೆ.25 ರಂದು ಜನತಾ ದರ್ಶನ

» ದಾವಣಗೆರೆ

ಮಾನ್ಯ ಮುಖ್ಯಮಂತ್ರಿಗಳ ಸೂಚನೆ ಅನ್ವಯ ಜಿಲ್ಲಾ ಮಟ್ಟದಲ್ಲಿ ಪ್ರತಿ ತಿಂಗಳು ಜನತ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಂಡು ಸಾರ್ವಜನಿಕ ಕುಂದು ಕೊರತೆಗಳನ್ನು ನಿರ್ವಹಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್ ಮಲ್ಲಿಕಾರ್ಜುನ್ ಅಧ್ಯಕ್ಷತೆಯಲ್ಲಿ ದಾವಣಗೆರೆ ತಾಲ್ಲೂಕಿನ ಕಡ್ಲೆಬಾಳು ಗ್ರಾಮದಲ್ಲಿ ಸೆ.25 ರಂದು ಸಾರ್ವಜನಿಕ ಕುಂದುಕೊರತೆ ಆಲಿಸಲು ಜನತಾ ದರ್ಶನ ಕಾರ್ಯಕ್ರಮ ನಡೆಯಲಿದೆ. ಈ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಸ್ವೀಕರಿಸಿ ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಲಾಗುತ್ತದೆ. ಜನತಾ ದರ್ಶನ ಕಾರ್ಯಕ್ರಮದಲ್ಲಿ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಸಾರ್ವಜನಿಕ ಕುಂದುಕೊರತೆಯ ನಿವಾರಣೆ ವ್ಯವಸ್ಥೆಯನ್ನು (ಐಕಉಐಖ) ತಂತ್ರಾಂಶದಲ್ಲಿ ದಾಖಲಿಸಿ ಕುಂದುಕೊರತೆಗಳನ್ನು ದಾಖಲಿಸಲು ಇಲಾಖಾವಾರು ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಲಾಗುತ್ತದೆ. ಸಾರ್ವಜನಿಕರು ಜನತ ದರ್ಶನ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಲು ಅವರು ತಿಳಿಸಿದ್ದಾರೆ.

### ಯುವತಿ ಕಾಣೆ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕಿನ ಕಾಲ್ಕೆರೆ ಲಂಬಾಣಿಹಟ್ಟಿ ಗ್ರಾಮದ ಜ್ಯೋತಿ (18 ವರ್ಷ) ಎಂಬ ಯುವತಿ 2023ರ ಸೆಪ್ಟೆಂಬರ್ 5ರಂದು ಕಾಣೆಯಾಗಿರುವ ಪ್ರಕರಣ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಯುವತಿಯ ಚಹರೆ ಇಂತಿದೆ. ಜ್ಯೋತಿ ತಂದೆ ಗೋವಿಂದನಾಯ್ಕ, 4.7 ಅಡಿ ಎತ್ತರ, ದುಂಡು ಮುಖ, ತೆಳುವಾದ ಮೈಕಟ್ಟು, ಎಣ್ಣೆಗೆಂಪು ಮೈ ಬಣ್ಣ, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೊಗುವಾಗ ಹಸಿರು ಬಣ್ಣದ ಟಾಪ್, ಕೆಂಪು ಬಣ್ಣದ ಪ್ಯಾಂಟ್, ಬಿಳಿ ಬಣ್ಣದ ಶ್ರಗ್ ಧರಿಸಿರುತ್ತಾರೆ.ಈ ಮೇಲ್ಕಂಡ ಯುವತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ದೂರವಾಣಿ ಸಂಖ್ಯೆ ಹೊಳಲ್ಕೆರೆ ಪೊಲೀಸ್ ಠಾಣೆ 08191-275233, ಹೊಳಲ್ಕೆರೆ ವೃತ್ತ ನಿರೀಕ್ಷಕರವರ ಕಚೇರಿ 08191-275376, ಚಿತ್ರದುರ್ಗ ಪೊಲೀಸ್ ಉಪಾಧೀಕ್ಷಕರ ಕಚೇರಿ 08194-2224304, ಚಿತ್ರದುರ್ಗ ಜಿಲ್ಲಾ ಕಂಟ್ರೋಲ್ ರೂಂ 08194-222782 ಗೆ ಸಂಪರ್ಕಿಸಬೇಕೆಂದು ಹೊಳಲ್ಕೆರೆ ಪೊಲೀಸ್ ಠಾಣೆಯ ಉಪನಿರೀಕ್ಷಕರು ತಿಳಿಸಿದ್ದಾರೆ.

### ನಾಗಪುರ ದೀಕ್ಷಾ ಭೂಮಿ ಭೇಟಿ: ಅರ್ಜಿ ಆಹ್ವಾನ

» ಚಿತ್ರದುರ್ಗ

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನರು ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿಗೆ ಭೇಟಿ ನೀಡಲು ಅನುಕೂಲವಾಗುವಂತೆ ಸರ್ಕಾರದ ಪರವಾಗಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತದೆ.
2023-24ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರ ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳಿಗೆ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಲಿಂಕ್ ߚಣಣಠಿ://ತಿ.ಇಚಿಡಿ.ಟಿಛಿ.ಟಿ ನ ದೀಕ್ಷಾ ಭೂಮಿ ಯಾತ್ರಾ ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸೆಪ್ಟೆಂಬರ್ 20 ರಿಂದ ಅ. 10 ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

### ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಅರ್ಜಿ

» ಚಿತ್ರದುರ್ಗ

2023-24ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನ ಮಾಡಲಾಗುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು 1 ರಿಂದ 10 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಅಕ್ಟೋಬರ್ 20ರೊಳಗೆ ಆನ್‌ಲೈನ್ ಮೂಲಕ ಕಾಲಾವಕಾಶ ನೀಡಲಾಗಿದೆ. ಸಮಾಜ ಕಲ್ಯಾಣ ಇಲಾಖಾ ವಿದ್ಯಾರ್ಥಿವೇತನವೆಬ್‌ಸೈಟ್ ssp.karnataka.gov.in ನಲ್ಲಿ ಅರ್ಜಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್, ತಿ.ಇಚಿಡಿ.ಟಿಛಿ.ಟಿ ನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅನಾಮಧೇಯ ಶವ ಪತ್ತೆ

ಚಳ್ಳಕೆರೆ: ನಗರದ ಕಾಟಪ್ಪನಹಟ್ಟಿಯ ಬಂಗೇರ ಕಪ್ಪಿಲೆ ಬಾವಿಯಲ್ಲಿ ಸುಮಾರು 50 ವರ್ಷದ ವ್ಯಕ್ತಿಯ ಶವ ಬಾವಿಯಲ್ಲಿ ದೊರಕಿದೆ. ಸಾರ್ವಜನಿಕರು ವಾಸನೆ ಬಂದ ಹಿನ್ನೆಲೆಯಲ್ಲಿ ಬಾವಿಯನ್ನು ನೋಡಿದಾಗ ವ್ಯಕ್ತಿಯ ಶವ ಇರುವುದು ತಿಳಿದುಬಂದು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಅಗ್ನಿಶಾಮಕ ಪಡೆ ಮತ್ತು ಪೊಲೀಸರು ಶವವನ್ನು ಬಾವಿಯಿಂದ ಹೊರ ತೆಗೆದು ಆಸ್ಪತ್ರೆ ಶವಗಾರದಲ್ಲಿಟ್ಟಿದ್ದಾರೆ. ಪೊಲೀಸರು ವಿಚಾರಣೆ ಮುಂದುವರೆಸಿದ್ದಾರೆ.

# ವಿಶ್ವದ ಕಲೆಯ ಶ್ರೀಮಂತಿಕೆ ಸಾಕಾರಗೊಳಿಸಿದ ಕೀರ್ತಿ ವಿಶ್ವಕರ್ಮರದ್ದು: ಶಾಸಕ ರಘುಮೂರ್ತಿ

» ಚಳ್ಳಕೆರೆ





ಶಿಲ್ಪಕಲೆ, ಚಿತ್ರಕಲೆಯೂ ಸೇರಿದಂತೆ ಹಲವಾರು ಕೆತ್ತನೆಗೆ ಜೀವತುಂಬಿ ಕಲೆಯ ಸಾಮ್ರಾಜ್ಯದ ಒಡೆಯನಾದ ವಿಶ್ವಕರ್ಮರ ಶಿಲ್ಪಕಲೆ ಸದಾ ಶಾಶ್ವತ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶುಕ್ರವಾರ ಇಲ್ಲಿನ ವೀರಶೈವ ಕಲ್ಯಾಣ ಮಂಟಪದಲ್ಲಿ ರಾಷ್ಟ್ರೀಯ ವಿಶ್ವಕರ್ಮ ಸಮಾಜಾಭಿವೃದ್ಧಿ ಸಂಘ, ವಿಶ್ವಕರ್ಮ ಚಿನ್ನಬೆಳ್ಳಿ, ಗಿರವಿವರ್ತಕರ ಸಂಘ, ವಿಶ್ವಕರ್ಮ ಮಹಿಳಾ ಜಾಗೃತಿ ಸಂಘ ಮತ್ತು ವಿಶ್ವಕರ್ಮ ಯುವಕ ಸಂಘ ಹಮ್ಮಿಕೊಂಡಿದ್ದ 46ನೇ ವಿಶ್ವಕರ್ಮ ಜಯಂತಿಯನ್ನು ದೀಪಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ವಿಶ್ವಕರ್ಮ ಸಮಾಜ ರಾಜಕೀಯ ಕ್ಷೇತ್ರವೂ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲೂ ನಿರೀಕ್ಷಿತ ಸಾಧನೆಯನ್ನು ಮಾಡಲು ಸಾಧ್ಯವಾಗಿಲ್ಲ, ನಾನು ಸಮಾಜದ ಒಳಿತಿಗೆ ಶ್ರಮಿಸುವೆ ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಚಿತ್ರದುರ್ಗ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ), ವಿಶ್ವಕರ್ಮ ಸಮಾಜ ಎಲ್ಲರ ಪ್ರೀತಿ, ವಿಶ್ವಾಸ ಗಳಿಸಿದೆ. ಜನಸಂಖ್ಯೆಯಲ್ಲಿ ಕಡಿಮೆ ಇದ್ದರೂ ಇವರ ಕೈಯಲ್ಲಿ ಅರಳುವ ಕಲೆಗೆ ಬೆಲೆಕಟ್ಟಲು ಸಾಧ್ಯವಿಲ್ಲ. ಕಲೆಯನ್ನು ಶಾಶ್ವತವಾಗಿ ಉಳಿಸುವಲ್ಲಿ ಈ ಸಮಾಜದ ಯಶಸ್ವಿಯಾಗಿದೆ. ಸಮಾಜದಲ್ಲಿ ಆರ್ಥಿಕವಾಗಿ ಹಿಂದುಳಿದವರಿಗೆ ಬ್ಯಾಂಕ್‌ನಿಂದ ನೇರ ಸಾಲ ಯೋಜನೆಯಲ್ಲಿ ಸಹಾಯ ಮಾಡುವುದಾಗಿ ತಿಳಿಸಿದರು.

ಜೆಡಿಎಸ್ ಯುವಮುಖಂಡ ಎಂ.ರವೀಶ್‌ಕುಮಾರ್ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ವಿಶ್ವಕರ್ಮ ಸಮಾಜದ ಬಂಧುಗಳೊಂದಿಗೆ ನಾನು ವಿಶ್ವಾಸವನ್ನು ಇಟ್ಟುಕೊಂಡಿದ್ದೇನೆ. ಪ್ರಾಮಾಣಿಕತೆ ಮತ್ತು ದಕ್ಷತೆಯಿಂದ ಇವರು ಕಾರ್ಯನಿರ್ವಹಿಸುತ್ತಾರೆ. ಯಾರಿಗೂ ಸಹ ಕೇಡುಬಯಸದೆ ಎಲ್ಲರೊಂದಿಗೆ ವಿಶ್ವಾಸದಿಂದ ಇರುವ ಕೆಲವೇ ಸಮಾಜಗಳಲ್ಲಿ ವಿಶ್ವಕರ್ಮ ಸಮಾಜವೂ ಒಂದು ಎಂದರು.

ದಿವ್ಯಸಾನಿಧ್ಯ ವಹಿಸಿದ್ದ ರಾಮಚಂದ್ರಸ್ವಾಮೀಜಿ ಮಾತನಾಡಿ, ಕರ್ನಾಟಕವೂ ಸೇರಿದಂತೆ ರಾಷ್ಟ್ರದ ಅನೇಕ ಭಾಗಗಳಲ್ಲಿ ವಿಶ್ವಕರ್ಮ ಜಯಂತಿ ಮೂಲಕ ಈ ಮಹಾನ್ ಮಹಿಮನನ್ನು ನೆನಪಿಸುವ ಕಾರ್ಯವನ್ನು ನಾವು ಮಾಡುತ್ತಿದ್ದೇವೆ. ವಿಶ್ವಕರ್ಮರ ಅಘಾದವಾದ ಕಲಾಪಾಂಡಿತ್ಯ ಎಂತಹವರನ್ನು ಬೆರಗು ಮಾಡುವಂತಹದ್ದು, ರಾಜ್ಯದಲ್ಲಿ ಸುಮಾರು 30ಕ್ಕೂ ಹೆಚ್ಚು ವಿಶ್ವಕರ್ಮ ಸಮಾಜದ ಬಂಧುಗಳಿದ್ದು, ಈ ಸಮಾಜದ ಶ್ರೇಯೋಭಿವೃದ್ಧಿಗೆ ಸರ್ಕಾರ ಚಿಂತನೆ ನಡೆಸಬೇಕು ಎಂದರು. ಡಿ.ಉಪ್ಪಾರಹಟ್ಟಿಯ ಗುರುಕರಿಬಸವೇಶ್ವರ ಅಜ್ಜಯ್ಯಸ್ವಾಮಿಮಠದಕರಿಬಸವಸ್ವಾಮೀಜಿ ಮಾತನಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೆಪಿಸಿಸಿ ಕುಶಲಕರ್ಮಿ ವಿಭಾಗದ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಸಮಾಜ ಇನ್ನೂ ಹೆಚ್ಚಿನ ಅಭಿವೃದ್ಧಿ ಪಡೆಯಲು ಉತ್ತಮ ಸ್ಥಾನಮಾನ ನೀಡಲು ಸರ್ಕಾರ ಮುಂದಾಗಬೇಕು. ಕೇವಲ ಚುನಾವಣೆ ಸಮಯದಲ್ಲಿ ಮಾತ್ರ ಸಮಾಜವನ್ನು ಸದುಪಯೋಗ ಪಡಿಸಿಕೊಂಡು ನಂತರ ನಿರ್ಲಕ್ಷಿಸುವುದು ಸರಿಯಲ್ಲವೆಂದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಅಧ್ಯಕ್ಷ ಡಿ.ವೆಂಕಟೇಶ್‌ಚಾರ್ ಮಾತನಾಡಿ, 46ನೇ ಜಯಂತಿ ಕಾರ್ಯಕ್ರಮದಲ್ಲಿ ನಿರೀಕ್ಷೆಗೂ ಮೀರಿ ಸಾವಿರಾರು ಸಮಾಜದ ಬಂಧುಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದೀರ, ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಿದ್ದೀರ, ಕ್ಷೇತ್ರದ ಶಾಸಕರು ಪಾವಗಡ ರಸ್ತೆಯಲ್ಲಿ ವಿಶ್ವಕರ್ಮ ವೃತ್ತವನ್ನು ಇಂದು ಉದ್ಘಾಟಿಸಿದ್ದಾರೆ. ಸಮಾಜದಲ್ಲಿ ಶಕ್ತಿ ತುಂಬುವ ಕೆಲಸ ನಡೆಯುತ್ತಿದ್ದು ಅದಕ್ಕೆ ಎಲ್ಲರ ಸಹಕಾರ ಅಗತ್ಯವೆಂದರು.

ಕಾರ್ಯಕ್ರಮದಲ್ಲಿ ಸಮಾಜ ಚಿಂತಕ ಅತ್ತಿಬೆಲೆ ಸೋಮು ಮಾತನಾದರು. ಡಿವೈಎಸ್ಪಿ ರಾಜಣ್ಣ, ನಗರಸಭೆ ಸದಸ್ಯರಾದ ಮಂಜುಳಾ, ಸುಮ, ಸುಮಕ್ಕ, ಕವಿತಾ, ಸಿ.ಶ್ರೀನಿವಾಸ್, ವಿ.ವೈ.ಪ್ರಮೋದ್, ಗೌರವಾಧ್ಯಕ್ಷ ಬಿ.ಆರ್.ಕೃಷ್ಣಚಾರ್, ವೈ.ರವೀಂದ್ರಚಾರ್, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಯುವ ಘಟಕದ ಅಧ್ಯಕ್ಷ ವೆಂಕಟೇಶ್(ಬಿಎನ್‌ಜಿ), ಕೆ.ಶ್ರೀನಿವಾಸ್‌ಚಾರ್, ಆರ್.ಬ್ರಹ್ಮಚಾರ್, ನಾಗರಾಜಚಾರ್, ಶ್ರೀಧರ್, ಗೌರವಾಧ್ಯಕ್ಷೆ ಸರಸ್ವತಮ್ಮ, ಅಧ್ಯಕ್ಷೆ ಕಮಲಮ್ಮ, ಕುಸುಮ, ಸುಮಲತ, ಪತ್ರಕರ್ತ ಕಿರಣ್, ಮೌನೇಶ್‌ಚಾರ್ ಭಾಗವಹಿಸಿದ್ದರು.

# ಯುವ ಜನೋತ್ಸವ: ಜಿಲ್ಲಾ ಮಟ್ಟದ ನಾಟಕ ಸ್ಪರ್ಧೆ

» ಚಿತ್ರದುರ್ಗ



ನಗರದ ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ )ದ ಡಾ.ಬಿ.ಆರ್. ಅಂಬೇಡ್ಕರ್ ಜ್ಞಾನ ಸಭಾಂಗಣದಲ್ಲಿ ದಿನಾಂಕ 22:09:2023 ಶುಕ್ರವಾರದಂದು ಜಿಲ್ಲಾಮಟ್ಟದ ನಾಟಕ ಸ್ಪರ್ಧೆ ನಡೆಯಿತು.

ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಮಂಡಳಿ, ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ & ತಡೆ ಘಟಕ, ಚಿತ್ರದುರ್ಗ, ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ), ರಾಷ್ಟ್ರೀಯ ಸೇವಾ ಯೋಜನೆ, ಐಕ್ಯೂಎಸಿ, ರೆಡ್ ರಿಬ್ಬನ್ ಕ್ಲಬ್ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ಈ ಕಾರ್ಯಕ್ರಮವು ಆಯೋಜನೆಗೊಂಡಿತ್ತು.

ಈಕಾರ್ಯಕ್ರಮದಉದ್ಘಾಟನೆಯನ್ನುಸರ್ಕಾರಿ ಕಲಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಬಿ.ಟಿ. ತಿಪ್ಪೇರುದ್ರಸ್ವಾಮಿರವರು ನೆರವೇರಿಸಿದರು.

ಮಾರಣಾಂತಿಕ ಕಾಯಿಲೆಯಾದ ಏಡ್ಸ್ ರೋಗವನ್ನು ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿಯನ್ನು ಮೂಡಿಸುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವಲ್ಲಿ ನಾಟಕಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು. ಜಿಲ್ಲಾ ಮೇಲ್ವಿಚಾರಕರಾದ ಶ್ರೀಯುತ ಅಶೋಕ್ ರವರು ಈ ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಯನ್ನು ನುಡಿದರು.

ಕಾಲೇಜಿನ ಅಧ್ಯಾಪಕರ ಸಂಘದ ಕಾರ್ಯದರ್ಶಿಗಳಾದ ಪ್ರೊ. ಎಲ್. ನಾಗರಾಜಪ್ಪರವರು ವಿದ್ಯಾರ್ಥಿಗಳು ಜನಸಾಮಾನ್ಯರಿಗೆ ಏಡ್ಸ್ ರೋಗದ ಬಗ್ಗೆ ಇರುವ ಕೆಲವು ಅಪಕಲ್ಪನೆಗಳನ್ನು ನಿವಾರಿಸಬೇಕೆಂದು ಕರೆ ಕೊಟ್ಟರು.

ಚಿತ್ರದುರ್ಗ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕ ದ ಮೇಲ್ವಿಚಾರಕರಾದ ಶ್ರೀ ವಿ. ಅಶೋಕ್ ರವರು ಏಡ್ಸ್ ರೋಗದ ಹರಡುವಿಕೆ, ಗುಣಲಕ್ಷಣಗಳು, ನಿಯಂತ್ರಣ ಕ್ರಮಗಳು, ಜನರಲ್ಲಿರುವ ಅಪಕಲ್ಪನೆಗಳು, ಇಲಾಖೆಯ ಸೌಲಭ್ಯಗಳು, ಇತ್ಯಾದಿ ವಿಷಯಗಳ ಕುರಿತು ಸ್ಥೂಲವಾಗಿ ವಿವರಿಸಿದರು.

ಎನ್.ಸಿ.ಸಿ. ಅಧಿಕಾರಿಗಳಾದ ಡಾ.ಆರ್.ಲೇಪಾಕ್ಷರವರು ಗ್ರಾಮೀಣ ಪ್ರದೇಶಗಳಲ್ಲಿ ಈ ರೋಗದ ಬಗ್ಗೆ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ಈ ನಾಟಕ ಸ್ಪರ್ಧೆಯ ತೀರ್ಪುಗಾರರಾಗಿ ವಿ.ಅಶೋಕ್ ಮತ್ತು ಪಾಲಯ್ಯ.ಹೆಚ್.ರವರು ಕಾರ್ಯನಿರ್ವಹಿಸಿದರು.

ಜಿಲ್ಲೆಯ ವಿವಿಧ ಪದವಿ ಕಾಲೇಜುಗಳಿಂದ ಸುಮಾರು ಒಂಬತ್ತು ನಾಟಕ ತಂಡಗಳು ಭಾಗವಹಿಸಿದ್ದವು.ಈ ನಾಟಕ ಸ್ಪರ್ಧೆಯ ತೀರ್ಪುಗಾರರಾಗಿ ವಿ.ಅಶೋಕ್ ಮತ್ತು ಪಾಲಯ್ಯ. ಹೆಚ್.ರವರು ಕಾರ್ಯನಿರ್ವಹಿಸಿದರು.

ಜಿಲ್ಲೆಯ ವಿವಿಧ ಪದವಿ ಕಾಲೇಜುಗಳಿಂದ ಸುಮಾರು ಒಂಬತ್ತು ನಾಟಕ ತಂಡಗಳು ಭಾಗವಹಿಸಿದ್ದವು.

ವಿವಿಧ ನಾಟಕ ತಂಡಗಳು ವಿವಿಧ ರೀತಿಯ ಪರಿಕರಗಳನ್ನು ಬಳಸುವ ಮೂಲಕ ಏಡ್ಸ್ ರೋಗದ ಕುರಿತು ಉತ್ತಮ ಅಭಿನಯ ಕೌಶಲ್ಯ ಪ್ರದರ್ಶಿಸಿ ನೆರೆದಿದ್ದವರನ್ನು ರಂಜಿಸಿದರು.

ಸರ್ಕಾರಿ ಪ್ರಥಮದರ್ಜೆ ಕಾಲೇಜು,ಹೊಳಲ್ಕೆರೆ ತಂಡವು ಪ್ರಥಮ ಸ್ಥಾನ ಪಡೆದು ಬಹುಮಾನದ ಮೊತ್ತವಾದ ರೂ.10000 ಗಳನ್ನು ಗಳಿಸಿತು. ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ),ಚಿತ್ರದುರ್ಗ ದ್ವಿತೀಯ ಸ್ಥಾನ ಪಡೆದು ರೂ.7000 ಗಳಿಸಿತು.

ಎಸ್.ಜೆ.ಎಂ.ಪ್ರಥಮ ದರ್ಜೆ ಕಾಲೇಜು, ಚಿತ್ರದುರ್ಗ ತೃತೀಯ ಸ್ಥಾನವನ್ನು ಪಡೆದು ರೂ. 4000 ಗಳಿಸಿತು.

ಕಾರ್ಯಕ್ರಮದ ನಂತರ ಉಪಾಹಾರದ ವ್ಯವಸ್ಥೆಯನ್ನುಮಾಡಲಾಗಿತ್ತು.ವಿಜೇತತಂಡಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಕಾಲೇಜಿನ ಎನ್.ಎಸ್.ಎಸ್. ಕಾರ್ಯಕ್ರಮಾಧಿಕಾರಿ ಗಳಾದ ಡಾ. ವಿ.ಪ್ರಸಾದ್ ಮತ್ತು ಡಿ.ಎಸ್.ಆರ್.ಸಿ. ಮೇಲ್ವಿಚಾರಕರಾದ ರವೀಂದ್ರ ಎಂ.ಎಲ್. ಹಾಗೂ ಎ.ಆರ್.ಟಿ. ಮೇಲ್ವಿಚಾರಕರಾದ ನರಹರಿ ರವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಗ್ರಂಥಾಲಯದ ಅಧಿಕಾರಿಗಳಾದ ಡಾ.ತಿಪ್ಪೇಸ್ವಾಮಿ ರವರು ವಂದಿಸಿದರು.




ವಿಶ್ವಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆ ಗುತ್ತಿನಾಡು ಈ ಸಂಸ್ಥೆಯ ರಜತ ಮಹೋತ್ಸವದ ಅಂಗವಾಗಿ ವಿಶ್ವಮಾನವ ಸಂಸ್ಥೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಚಿತ್ರದುರ್ಗ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ ಚಿತ್ರದುರ್ಗ ಇವರ ಆಶ್ರಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಕ್ಯಾಸಾಪುರ ಇವರಿಂದ ಕ್ಷಯರೋಗ ತಪಾಸಣಾ ಶಿಬಿರ ಮತ್ತು ಎಸ್.ಜೆ.ಎಂ. ದಂತಾ ಕಾಲೇಜು ಚಿತ್ರದುರ್ಗ ಇವರಿಂದ ದಂತ ಚಿಕಿತ್ಸಾ ಶಿಬಿರವನ್ನು ಏರ್ಪಡಿಸಲಾಗಿತ್ತು.



ಚಿತ್ರದುರ್ಗ ನಗರದಲ್ಲಿ ನಡೆದಂತಹ ಜಿಲ್ಲಾ ಮಟ್ಟದ ಚೆಸ್ ಆಟ ಹಾಗೂ ಕರಾಟೆ ಸ್ಪರ್ಧೆಯಲ್ಲಿ ನಮ್ಮ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ ಪ್ರಥಮ ಸ್ಥಾನಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿಗಳಿಗೆ ಕಾರ್ಯದರ್ಶಿಗಳಾದ ಎಂ.ನೀಲಕಂಠದೇವರು, ರೂವಾರಿಗಳಾದ ಹೆಚ್.ಜಲೀಲ್ ಸಾಬ್, ಮುಖ್ಯೋಪಾಧ್ಯಾಯರಾದ ಜಿ.ಆರ್. ಚನ್ನಬಸಪ್ಪ ಹಾಗೂ ದೈಹಿಕ ಶಿಕ್ಷಕರು, ಎಲ್ಲಾ ಶಿಕ್ಷಕರು, ವಿದ್ಯಾರ್ಥಿಗಳು ಅಭಿನಂದಿಸಿದರು.

## ಪ್ರಮುಖ ಸುದ್ದಿ

# ಪೌರ ಕಾರ್ಮಿಕರು ಸ್ವಚ್ಛತೆಯ ಸೇನಾನಿಗಳು: ಜಿಲ್ಲಾಧಿಕಾರಿ

» ದಾವಣಗೆರೆ



ಪೌರ ಕಾರ್ಮಿಕರ ಶ್ರಮವೇ ನಗರವಾಸಿಗಳು ಆರೋಗ್ಯದಿಂದ ಇರಲು ಕಾರಣವಾಗಿದೆ. ಈ ನಿಟ್ಟಿನಲ್ಲಿ ಪೌರಕಾರ್ಮಿಕರು ಸ್ವಚ್ಚತೆಯ ಸೇನಾನಿಗಳು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದರು.

ಶನಿವಾರ ಗುಂಡಿ ಮಹದೇವಪ್ಪ ಕಲ್ಯಾಣ ಮಂಟಪದಲ್ಲಿ ಜರುಗಿದ ಪೌರ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿ ಕೊರೋನಾದ ಸಂಧರ್ಭದ ಸಂಕಷ್ಟದ ದಿನಗಳಲ್ಲಿಯೂ ಜನರ ಆರೋಗ್ಯದ ರಕ್ಷಣೆಗಾಗಿ ತಮ್ಮ ಪ್ರಾಣವನ್ನು ಪಣಕ್ಕಿಟ್ಟು ಕಾರ್ಯನಿರ್ವಹಿಸಿ ಪೌರಕಾರ್ಮಿಕರು ವೈದ್ಯ ಸಮೂಹದಷ್ಟೆ ಪ್ರಧಾನ ಪಾತ್ರ ವಹಿಸಿದ್ದಾರೆ.

ಸಮಾಜದಸ್ವಾಸ್ಥವನ್ನುಕಾಪಾಡುವವರು ಪೌರಕಾರ್ಮಿಕರು, ದಿನನಿತ್ಯದ ಜೀವನದಲ್ಲಿ ಉತ್ಪತ್ತಿಯಾಗುವ ನಾನಾ ರೀತಿಯ ಕಸ, ಕೊಳಕು ನಿರ್ಮಾಣವಾಗುತ್ತದೆ. ಅದನ್ನು ನಿರ್ಮೂಲನಗೊಳಿಸಿ ಸೇವಾ ಮನೋ ಭಾವದಿಂದ ಪರಿಸರವನ್ನು ಸ್ವಚ್ಛವಾಗಿಸುತ್ತಾರೆ. ಅವರ ಈ ಕೆಲಸ ಶ್ಲಾಘನೀಯವಾದದು. ಅವರು ದಿನನಿತ್ಯ ಸೋಂಕಿನೊಂದಿಗೆ ಕೆಲಸ ಮಾಡುತ್ತಾರೆ, ಅವರ ಆರೋಗ್ಯವಾಗಿರುವುದು ಅಷ್ಟೇ ಮುಖ್ಯವಾದದ್ದು.

ಹಿಂದೆ ಪೌರಕಾರ್ಮಿಕರು ಅನೇಕ ರೀತಿಯ ಶೋಷಣೆಗೆ ಒಳಗಾಗುತ್ತಿದ್ದರು, ಆದರೆ ಇಂದಿನ ದಿನಮಾನಗಳಲ್ಲಿ ಸರ್ಕಾರ ಅವರಿಗಾಗಿ ಅನೇಕ ಸೌಲಭ್ಯಗಳನ್ನು ನೀಡುತ್ತಿದೆ. ಜಿಲ್ಲೆಯಲ್ಲಿ 381 ಮನೆಗಳನ್ನು ಪೌರಕಾರ್ಮಿಕರಿಗಾಗಿ ನಿರ್ಮಿಸಿ ದಾಖಲೆ ಬರೆಯಲಾಗಿದೆ. ಜಿಲ್ಲೆಗಳಲ್ಲಿಯೂ ಪೌರಕಾರ್ಮಿಕರಿಗಾಗಿ ಇಷ್ಟು ಮನೆಗಳು ನಿರ್ಮಾಣವಾಗಿಲ್ಲ. ಜಿಲ್ಲಾಡಳಿತ ಮತ್ತು ಮಹಾನಗರ ಪಾಲಿಕೆ ಪೌರ ಕಾರ್ಮಿಕರ ಅಭಿವೃದ್ಧಿಗಾಗಿ ಯಾವಾಗಲೂ ಶ್ರಮಿಸುತ್ತದೆ ಎಂದರು.

ಮಹಾನಗರ ಪಾಲಿಕೆ ಸಾರ್ವಜನಿಕ ಆರೋಗ್ಯ ಶಿಕ್ಷಣ ಮತ್ತು ಸಾಮಾಜಿಕ ನ್ಯಾಯಗಳ ಸ್ಥಾಯಿ ಸಮಿತಿ ಅಧ್ಯಕ್ಷೆ ಮೀನಾಕ್ಷಿ ಜಗದೀಶ್ ಮಾತನಾಡಿ ಪೌರಕಾರ್ಮಿಕರು ನಗರದ ಜೀವನಾಡಿಗಳು, ಅವರ ಕುರಿತು ಎಷ್ಟು ಹೇಳಿದರೂ ಸಾಲದು ಬೆಳಗಿನ ಜಾವ ಚಳಿ,ಗಾಳಿ ಎನ್ನದೆ ತಮ್ಮ ಕಾರ್ಯದಲ್ಲಿ ನಿರತರಾಗುತ್ತಾರೆ. ಪೌರಕಾರ್ಮಿಕರು ತಮ್ಮ ಆರೋಗ್ಯದ ಕಡೆಗೂ ಗಮನಹರಿಸಬೇಕು, ಸರ್ಕಾರದ ಸವಲತ್ತುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಹಾಗೂ ತಮ್ಮ ಮಕ್ಕಳಿಗೂ ಉತ್ತಮ ಶಿಕ್ಷಣವನ್ನು ನೀಡಬೇಕು ಎಂದರು. ಮಹಾನಗರ ಪಾಲಿಕೆ ಹಿರಿಯ ಸದಸ್ಯ ಚಮನ್ ಸಾಬ್ ಮಾತನಾಡಿ ಯಾವುದೇ ಸಮಯದಲ್ಲಿ ಪೌರಕಾರ್ಮಿಕರು ತಮ್ಮ ವೃತ್ತಿಯನ್ನು ಮರೆಯದೆ ನಗರದ ಸ್ವಚ್ಛತೆಗೆ ಶ್ರಮಿಸುತ್ತಿದ್ದಾರೆ. ಅವರಿಂದಲೇ ನಗರ ಸ್ವಚ್ಛ, ಸುಂದರ ಹಾಗೂ ಆರೋಗ್ಯದಿಂದಿರುತ್ತದೆ.

ಪೌರಕಾರ್ಮಿಕರು ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವ ಮೂಲಕ ಉನ್ನತ ಸ್ಥಾನಕ್ಕೇರುವಂತಾಗಬೇಕು. ಡಾ. ಬಿ.ಆರ್ ಅಂಬೇಡ್ಕರ್ ಅವರು ಹೇಳಿದಂತೆ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ಉತ್ತಮ ಪೌರ ಕಾರ್ಮಿಕರಿಗೆ ಮತ್ತು ಎಸ್.ಎಸ್. ಎಲ್.ಸಿ, ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಹಾಗೂ ವಿವಿಧ ಸ್ನಾತಕೋತ್ತರ ಪದವಿ ಪಡೆದ ಪೌರ ಕಾರ್ಮಿಕರ ಮಕ್ಕಳಿಗೆ ರೂ.10,000/- ನಗದು ಬಹುಮಾನ ವಿತರಿಸಲಾಯಿತು. ಹಾಗೂ ಪೌರ ಕಾರ್ಮಿಕರಿಗೆ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ನಡೆಸಲಾಗಿದ್ದು, ವಿಜೇತರಿಗೆ ಪ್ರಮಾಣ ಪತ್ರ ಹಾಗೂ ಬಹುಮಾನ ನೀಡಲಾಯಿತು.

ಪಾಲಿಕೆ ಪೂಜ್ಯ ಮಹಾಪೌರರಾದ ವಿನಾಯಕ ಬಿ.ಹೆಚ್, ಉಪಮಹಾಪೌರರಾದ ಯಶೋಧ ಯಗ್ಗಪ್ಪ, ಮಹಾನಗರ ಪಾಲಿಕೆ ನಗರ ಯೋಜನೆ ಮತ್ತು ಸುಧಾರಣೆ ಸ್ಥಾಯಿ ಸಮಿತಿ ಅಧ್ಯಕ್ಷ ಅಬ್ದುಲ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಬೃಹತ್ ಉದ್ಯೋಗ ಮೇಳ-2023

ದಾವಣಗೆರೆ: ವಿಕಲಚೇತನರ ರಾಷ್ಟ್ರೀಯ ವೃತ್ತಿ ಸೇವಾ ಕೇಂದ್ರ, ಭಾರತ ಸರ್ಕಾರ, ಉದ್ಯೋಗ ಮಹಾ ನಿರ್ದೇಶನಾಲಯ, ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ, ಪೀಣ್ಯ, ಬೆಂಗಳೂರು, ಅಮೇರಿಕಾ ಇಂಡಿಯಾ ಫೌಂಡೇಷನ್ ಮತ್ತು ಸರಕಾರಿ ಗಿರಿಧರ ರಾಮನಾರಾಯಣ ಇನ್‌ಸ್ಟಿಟ್ಯೂಟ್ ಆಫ್ ಕಮರ್ಷಿಯಲ್ ಪ್ರಾಕ್ಟಿಸ್, ಬೆಂಗಳೂರು ಇವರುಗಳ ಸಹಯೋಗದೊಂದಿಗೆ ಸೆಪ್ಟೆಂಬರ್ 26 ರಂದು ಬೆಳಿಗ್ಗೆ 10 ಗಂಟೆಗೆ ಸರಕಾರಿ ಗಿರಿಧರ ರಾಮನಾರಾಯಣ ಇನಸ್ಟಿಟ್ಯೂಟ್ ಆಫ್ ಕಮರ್ಷಿಯಲ್ ಪ್ರಾಕ್ಟಿಸ್, ಕೆ.ಆರ್. ಸರ್ಕಲ್, ಬೆಂಗಳೂರು ಈ ಆವರಣದಲ್ಲಿ ವಿಕಲಚೇತನ ನಿರುದ್ಯೋಗಿ ಯುವಕ–ಯುವತಿಯರಿಗೆ "ಬೃಹತ್ ಉದ್ಯೋಗ ಮೇಳ–2023 ಆಯೋಜಿಸಲಾಗಿದೆ ದಾವಣಗೆರೆ ಜಿಲ್ಲೆಯ ಅರ್ಹ ನಿರುದ್ಯೋಗ ವಿಕಲಚೇತನರು ಸದುಪಯೋಗ ಪಡೆದುಕೊಳ್ಳಬಹುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ|| ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

### ಪ.ಜಾತಿ, ಪ.ಪಂಗಡದ ಅಭ್ಯರ್ಥಿಗಳಿಗೆ ಉದ್ಯಮಶೀಲತಾ ಶಿಬಿರ

ದಾವಣಗೆರೆ: ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸೆಪ್ಟೆಂಬರ್ 26 ರಂದು ನಗರದ ದೇವರಾಜ ಅರಸು ಬಡಾವಣೆ ಎ. ಬ್ಲಾಕ್‌ನ #297 ಸ್ಫೂರ್ತಿ ಸಾಮಾಜಿಕ ಶೈಕ್ಷಣಿಕ ಅಭಿವೃದ್ಧಿ ಸಂಸ್ಥೆಯಲ್ಲಿ ಒಂದು ದಿನದ ಉದ್ಯಮಶೀಲತಾ ತಿಳುವಳಿಕೆ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.ಬೆಂಗಳೂರು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಸಿಡಾಕ್(ಕರ್ನಾಟಕ ಉದ್ಯಮಶೀಲತಾ ಕೇಂದ್ರ, ಧಾರವಾಡ) ಸಂಸ್ಥೆಯಿಂದ ಶಿಬಿರವನ್ನು ಆಯೋಜಿಸಲಾಗಿದ್ದು, ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಚಿಸುವ ಆಸಕ್ತರಿಗೆ ಪ್ರೇರಣೆ, ಸರ್ಕಾರ ಮತ್ತು ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು, ಪ್ರೋತ್ಸಾಹ ಹಾಗೂ ಮುಂದೆಕೈಗೊಳ್ಳಲಾಗುವ ಉದ್ಯಮಶೀಲತಾ ತರಬೇತಿ ಕುರಿತು ಶಿಬಿರದಲ್ಲಿ ಮಾಹಿತಿ ನೀಡಲಾಗುವುದು. ಭಾಗವಹಿಸಲು ಇಚ್ಚಿಸುವವರು 18 ವರ್ಷ ಮೇಲ್ಪಟ್ಟವರಾಗಿದ್ದು, ಓದುವ ಮತ್ತು ಬರೆಯುವ ಸಾಮರ್ಥ್ಯವುಳ್ಳವರಾಗಿರಬೇಕು. ಆಸಕ್ತರು 2 ಪಾಸ್ ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್‌ದೊಂದಿಗೆ ಶಿಬಿರಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರ ಕಚೇರಿ, ಸಿಡಾಕ್, ಪ್ಲಾಟ್ ನಂ.76ಎ–(ಪಿ1), ಕರೂರು ಕೈಗಾರಿಕಾ ಪ್ರದೇಶ, ಪಿ.ಬಿ ರಸ್ತೆ, ದಾವಣಗೆರೆ, ದೂ.ಸಂ. ಹಾಗೂ ತರಬೇತುದಾರ ಬಸವರಾಜ ಜಿ.ಬಿ ಮೊ ನಂ. 9164742033 ಗೆ ಸಂಪರ್ಕಿಸಲು ಸಿಡಾಕ್‌ನ ಜಿಲ್ಲಾ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

### ಪಡಿತರ ಧಾನ್ಯ ಹಂಚಿಕೆ

ದಾವಣಗೆರೆ; ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಸೆಪ್ಟೆಂಬರ್ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ 21 ಕೆ.ಜಿ ಅಕ್ಕಿ ಮತ್ತು ರಾಗಿ 14 ಕೆ.ಜಿ ಪ್ರತಿ ಕಾರ್ಡ್‌ಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3 ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2 ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5 ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಗ್ಯಾರಂಟಿ ಯೋಜನೆಯಡಿ ಆದ್ಯತಾ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ ಮತ್ತು ಅಂತ್ಯೋದಯ ಪಡಿತರ ಚೀಟಿಯ 3 ಕ್ಕಿಂತ ಹೆಚ್ಚಿನ ಪ್ರತಿ ಸದಸ್ಯರಿಗೆ ರಾಜ್ಯ ಸರ್ಕಾರದ 5 ಕೆ.ಜಿ ಹೆಚ್ಚುವರಿ ಅಕ್ಕಿಯ ಬದಲು ವ್ಯಕ್ತಿಗೆ ತಲಾ 170 ನಂತೆ ಲಿಂಕ್ ಆಗಿರುವ ಬ್ಯಾಕ್ ಖಾತೆಗಳಿಗೆ ನೇರವಾಗಿ ಡಿ.ಬಿ.ಟಿ ಮೂಲಕ ಹಣ ಜಮೆ ಮಾಡಲಾಗುತ್ತಿದೆ. ಈ ಕುರಿತು ತಾಂತ್ರಿಕ ದೋಷಗಳಿದ್ದಲ್ಲಿ ಬ್ಯಾಕ್ ಶಾಖೆಗಳಿಗೆ ಅಥವಾ ಆಹಾರ ನಿರೀಕ್ಷಕರನ್ನು ಸಂಪರ್ಕಿಸಿ ಸಮಸ್ಯೆಯನ್ನು ಬಗೆಹರಿಸಿಕೊಳ್ಳಲು ಜಿಲ್ಲಾ ಆಹಾರ ನಾಗರಿಕರ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಅಕ್ರಮ ಮರಳು ಸಾಗಾಣಿಕೆ : ಆರೋಪಿಗೆ ನ್ಯಾಯಾಂಗ ಬಂಧನ.

» ಚಳ್ಳಕೆರೆ

ಚಳ್ಳಕೆರೆ ಠಾಣಾ ವ್ಯಾಪ್ತಿಯ ಕರೀಕೆರೆ ಗರಣಿ ಹಳ್ಳದ ಸರ್ಕಾರಿ ಜಾಗದಲ್ಲಿ ಆಕ್ರಮವಾಗಿ ಟ್ರ್ಯಾಕ್ಟರ್‌ನಲ್ಲಿ ಮರಳನ್ನು ಕದ್ದು ಸಾಗಾಣಿಕೆ ಮಾಡುತ್ತಿದ್ದ ರಂಗವ್ವನಹಳ್ಳಿಯ ಟ್ರ್ಯಾಕ್ಟರ್ ಚಾಲಕ ಬೋರೇಶ್(27) ಎಂಬುವವರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ.

ಈ ಬಗ್ಗೆ ಮಾಹಿತಿ ನೀಡಿದ ಪಿಎಸ್‌ಐ ಕೆ.ಸತೀಶ್‌ನಾಯ್ಕ, ಸಾರ್ವಜನಿಕ ಮಾಹಿತಿ ಹಿನ್ನೆಲೆಯಲ್ಲಿ ಮಧ್ಯಾಹ್ನ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ಆರೋಪಿ ಬೋರೇಶ್ ತನ್ನ ಟ್ರ್ಯಾಕ್ಟರ್‌ನಲ್ಲಿ ಮರಳು ತಂದು ಸಾಗಾಟ ಮಾಡುತ್ತಿದ್ದು, ಆತನನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಿ ನ್ಯಾಯಾಂಗ ವಶಕ್ಕೆ ನೀಡಲಾಗಿದೆ ಎಂದರು.

## ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚರಿಕೆ ವಹಿಸಿ: ಜಿಲ್ಲಾಧಿಕಾರಿ ದಿವ್ಯಪ್ರುಭು ಜಿ.ಆರ್.ಜೆ

# ಜಾನುವಾರು ಲಸಿಕೆ ಕಾರ್ಯಕ್ರಮ ಯಶಸ್ವಿಗೊಳಿಸಿ

» ಚಿತ್ರದುರ್ಗ

ರಾಜ್ಯದಲ್ಲಿ ಈಗಾಗಲೇ ಬರ ಪರಿಸ್ಥಿತಿ ಎದುರಾಗಿದೆ. ರೈತರು ಸಂಕಷ್ಟದಲ್ಲಿ ಇದ್ದಾರೆ. ಪಶುಪಾಲನೆ ಮಾಡುವ ರೈತರ ಜಾನುವಾರುಗಳಿಗೆ ಸಾಂಕ್ರಾಮಿಕ ರೋಗ ಹರಡಿ ಸಾವುಗಳು ಉಂಟಾಗದಂತೆ ತಡೆಯುವುದು ಆದ್ಯ ಕರ್ತವ್ಯವಾಗಿದೆ. ಜಿಲ್ಲೆಯಲ್ಲಿ ಕಾಲುಬಾಯಿ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ, ಎಲ್ಲಾ ರೀತಿಯ ಮುನ್ನೆಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್. ಜೆ ಪಶು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ 4ನೇ ಸುತ್ತಿನ ಕಾಲುಬಾಯಿ ಲಸಿಕಾ ಅಭಿಯಾನ ಮತ್ತು ಉಚಿತ ರೇಬೀಸ್ ಲಸಿಕೆ ಅನುಷ್ಠಾನ ಕುರಿತು ಜರುಗಿದ ಜಿಲ್ಲಾ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳು ಲಸಿಕಾ ಕಾರ್ಯಕ್ರಮದ ಯಶಸ್ವಿಯಾಗಿ ಅನುಷ್ಠಾನಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ. ಪ್ರತಿ ಜಾನುವಾರುಗಳಿಗೆ ಲಸಿಕೆ ನೀಡಿದ ಕುರಿತು ಖಾತ್ರಿ ಪಡಿಸಿಕೊಳ್ಳಬೇಕು. ಲಸಿಕೆ ನೀಡದ ಜಾನುವಾರುಗಳ ವಿವರವನ್ನು ಸಂಗ್ರಹಿಸಬೇಕು. ಲಸಿಕಾ ಅಭಿಯಾನದ ಕುರಿತು ವ್ಯಾಪಕವಾಗಿ ಪ್ರಚಾರ ನೀಡಿ ಜಿಲ್ಲೆಯ ಎಲ್ಲಾ ಭಾಗಗಳಲ್ಲಿನ ಜಾನುವಾರುಗಳಿಗೆ ಲಸಿಕೆ ನೀಡಬೇಕು. ಚರ್ಮಗಂಟು ರೋಗದ ಕುರಿತು ನಿಗಾ ವಹಿಸಬೇಕು ಎಂದರು.

30 ದಿನಗಳ ಅಭಿಯಾನದಲ್ಲಿ 3,38,907 ಜಾನುವಾರುಗಳಿಗೆ ಲಸಿಕೆ : ಸೆಪ್ಟೆಂಬರ್ 26 ರಿಂದ ಅಕ್ಟೋಬರ್ 25 ರವರೆಗೆ 30 ದಿನಗಳ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಜರುಗಲಿದೆ. ಈ ಅಭಿಯಾನದಲ್ಲಿ ಜಿಲ್ಲೆಯ 3,38,907 ಜಾನುವಾರುಗಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ.

ಜಿಲ್ಲೆಯ ಆರು ತಾಲೂಕುಗಳ 991 ಗ್ರಾಮಗಳಲ್ಲಿ ಲಸಿಕಾ ಅಭಿಯಾನ ನಡೆಯಲಿದ್ದು, 3390 ಲಸಿಕಾ ಕಾರ್ಯದ ಬ್ಲಾಕ್‌ಗಳನ್ನು ಗುರುತಿಸಲಾಗಿದೆ. ಈಗಾಗಲೇ 3,39,000 ಲಸಿಕಾ ಡೊಸ್‌ಗಳನ್ನು ಸಂಗ್ರಹಿಸಿ ಇಡಲಾಗಿದೆ. ಒಟ್ಟು 237 ಲಸಿಕಾದಾರರು ಲಸಿಕಾ ಕಾರ್ಯ ನಿರ್ವಹಿಸಲಿದ್ದಾರೆ. ಪ್ರತಿದಿನ 3 ಗಂಟೆ ದಿನದ ಲಸಿಕಾ ಪ್ರಗತಿ ವರದಿಯನ್ನು ತಂತ್ರಾಂಶದಲ್ಲಿ ಅಳವಡಿಸಲಾಗುವುದು. ಕಳೆದ ವರ್ಷ ನವೆಂಬರ್‌ನಲ್ಲಿ ಜರುಗಿದ 3ನೇ ಸುತ್ತಿನ ಕಾಲುಬಾಯಿ ಲಸಿಕಾ ಅಭಿಯಾನದಲ್ಲಿ ಶೇ.98 ರಷ್ಟು ಜಾನುವಾರುಗಳಿಗೆ ಲಸಿಕೆ ನೀಡಲಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ ಉಪನಿರ್ದೇಶಕ ಡಾ.ಬಾಬುರತ್ನ ಸಭೆಯಲ್ಲಿ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಗುರುತಿಸಲಾಗಿರುವ 3,38,907 ಜಾನುವಾರುಗಳಪೈಕಿ 2,25,603 ದನಗಳು ಹಾಗೂ 1,13,304 ಎಮ್ಮೆಗಳು ಇವೆ. ಗರ್ಭಧರಿಸಿದ ಜಾನುವಾರುಗಳಿಗೆ ಮಾಲೀಕರು ಲಸಿಕೆ ಕೊಡಿಸದಿದ್ದರೆ ಅಂತಹ ವಿವರಗಳನ್ನು ಪ್ರತ್ಯೇಕವಾಗಿ ಸಂಗ್ರಹಿಸಿಡಲಾಗುವುದು ಎಂದರು.

ಉಚಿತ ರೇಬೀಸ್ ಲಸಿಕೆ : ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 27 ರವರೆಗೆ ರೇಬೀಸ್ ಲಸಿಕಾ ಅಭಿಯಾನವು ಜರುಗಲಿದೆ. ಉಚಿತವಾಗಿ ರೇಬೀಸ್ ಲಸಿಕೆಯನ್ನು ನೀಡಲಾಗುವುದು. ಸಾರ್ವಜನಿಕರು ಸಾಕು ನಾಯಿಗಳಿಗೆ ರೇಬೀಸ್ ಹಾಕಿಸಿಕೊಳ್ಳುವಂತೆ ಉಪನಿರ್ದೇಶಕ ಡಾ.ಬಾಬುರತ್ನ ಕೋರಿದ್ದಾರೆ.

ಇದೇ ಸಂದರ್ಭದಲ್ಲಿ 4ನೇ ಸುತ್ತಿನ ಕಾಲುಬಾಯಿ ಲಸಿಕಾ ಅಭಿಯಾನದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಸೇರಿದಂತೆ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವೆಗಳ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಧಾರ್ಮಿಕ ಕಾರ್ಯಕ್ರಮಗಳಿಂದ ಸನ್ಮಾರ್ಗದತ್ತ ನಡೆದ ಮಹಾನ್ ಸಾಧ್ವಿ ವಿಶಾಲಾಕ್ಷಮ್ಮ: ಸ್ವಾಮೀಜಿ

» ಚಳ್ಳಕೆರೆ

ಧಾರ್ಮಿಕ ಕಾರ್ಯಕ್ರಮಗಳು, ಚಿಂತನೆಗಳು, ಆಧ್ಯಾತ್ಮಿಕ ನಡೆ ಹಾಗೂ ಪರಿಶುದ್ಧವಾದ ಭಕ್ತಿ ಮತ್ತು ಮನಸ್ಸಿನಿಂದ ದೇವರ ಸೇವೆ ಮಾಡಿದಂತಹರು ಮಾತ್ರ ಸನ್ಮಾರ್ಗದತ್ತ ಹೆಜ್ಜೆ ಇಡುತ್ತಾರೆ. ದೇವರು ಮತ್ತು ದೈವದ ಬಲವನ್ನು ಹೊಂದಿದವರು ಬದುಕಿನ ಸಾರ್ಥಕತೆಯನ್ನು ಕಂಡುಕೊಳ್ಳುತ್ತಾರೆ. ಇಂತಹ ವ್ಯಕ್ತಿಗಳನ್ನು ಬಗ್ಗೆ ಸಮಾಜ ಸದಾ ಸ್ಮರಿಸುತ್ತದೆ ಎಂದು ನರಹರಿ ಸದ್ಗುರುಪೀಠದ ವೈ.ರಾಜರಾಂ ತಿಳಿಸಿದರು. ಅವರು, ಇಲ್ಲಿನ ವಾಸವಿ ಮಹಲ್‌ನಲ್ಲಿ ನರಹರಿ ಸದ್ಗುರುಪೀಠದ ದೈವಭಕ್ತರು ಹಾಗೂ ಟ್ರಸ್ಟ್ ಸಮಿತಿ ಗೌರವಾಧ್ಯಕ್ಷರಾದ ಚೆಕ್ಕೆಮಂಡಿ ಮಾರುತಿಯವರ ಧರ್ಮಪತ್ನಿ ವಿಶಾಲಾಕ್ಷಮ್ಮನವರ ನುಡಿನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.



ವಿಶಾಲಾಕ್ಷಮ್ಮನವರು ಸದಾಕಾಲ ದೇವರ ನಾಮದಲ್ಲಿಯೇ ಕಾಲಕಳೆ ಯುವಂತಹ ಮಹಸಾಧ್ವಿ ಯಾಗಿದ್ದರು. ಆರ್ಯವೈಶ್ಯ ಸಮುದಾಯದ ಮಹಿಳಾ ಸಂಘಟನೆಯನ್ನು ಸ್ಥಾಪಿಸಿ ಅದಕ್ಕೆ ಶಕ್ತಿ ತುಂಬಿದವರು.ವಿಶೇಷವಾಗಿ ನರಹರಿ ಸದ್ಗುರುಪೀಠದ ಪ್ರತಿಯೊಂದು ಕಾರ್ಯಕ್ರಮಗಳಲ್ಲೂ ಪಾಲ್ಗೊಳ್ಳುವ ಮೂಲಕ ಆಧ್ಯಾತ್ಮಿಕ ಚಿಂತನೆಗಳನ್ನು ಮೈಗೂಡಿ ಸಿಕೊಂಡಿದ್ದವರು. ಯಾವ ವ್ಯಕ್ತಿ ದೇವರು, ಧರ್ಮ ಮತ್ತು ಭಕ್ತಿಯ ಭಾವನೆಯಲ್ಲಿ ತೊಡಗುತ್ತಾರೋ ಅಂತಹವರು ಯಾವುದೇ ಸಮಸ್ಯೆ ಇಲ್ಲದೆ ತಮ್ಮ ಬದುಕಿನ ಸಾರ್ಥಕತೆಯನ್ನು ಪಡೆದುಕೊಳ್ಳುತ್ತಾರೆ.

ವಿಶಾಲಾಕ್ಷಮ್ಮ ಭೌತಿಕ ನಮ್ಮಲ್ಲಿ ಇಲ್ಲದಿದ್ದರೂ ಅವರ ಸರಳ ಸುಂದರ ಜೀವನ ಎಲ್ಲರಿಗೂ ಮಾದರಿಯಾಗಿದೆ ಎಂದರು. ಚಿತ್ರದುರ್ಗದ ಕಬೀರಾನಂದ ಮಠದ ಶಿವಲಿಂಗನಂದಸ್ವಾಮೀಜಿ ಮಾತನಾಡಿ, ಭಗವಂತನು ಕರುಣಿಸುವ ಮನುಷ್ಯನ ಜನ್ಮವನ್ನು ಸಾರ್ಥಕತೆಗೊಳಿಸಿಕೊಳ್ಳುವಲ್ಲಿ ನಾವೆಲ್ಲರೂ ಮುಂದಾಗಬೇಕು. ದೇವರ ಕೃಪೆಯಿಂದ ನಮ್ಮೆಲ್ಲರಿಗೂ ಉತ್ತಮವಾದ ಜ್ಞಾನವಿದೆ. ಧಾರ್ಮಿಕ ವಿಚಾರಗಳ ಬಗ್ಗೆ ಶ್ರದ್ದೆಯಿದೆ, ಸಂಸ್ಕೃತಿ ಮತ್ತು ಸಂಸ್ಕಾರವನ್ನು ಅಳವಡಿಸಿಕೊಂಡು ಬದುಕು ನಡೆಸುತ್ತಿರುವರು ಎಂದರೆ ಭಾರತೀಯರು ಮಾತ್ರ. ನಾವೆಲ್ಲರೂ ಉತ್ತಮ ಸಾಮಾಜಿಕ ಸೇವಾ ಕಾರ್ಯಗಳ ಮೂಲಕ ಸಮಾಜದಲ್ಲಿ ಆದರ್ಶರಾಗಿ ಬಾಳಬೇಕು. ವಿಶಾಲಾಕ್ಷಮ್ಮನವರೂ ಸಹ ಅದೇ ಹಾದಿಯಲ್ಲಿ ನಡೆದವರು ಎಂದರು. ಕಾರ್ಯಕ್ರಮದಲ್ಲಿ ಚಕ್ಕೆಮಂಡಿಮಾರುತಿ, ಜಿ.ಎಂ. ರಮೇಶ್, ಮೀರಾರಮೇಶ್, ಕುಟುಂಬದ ಸದಸ್ಯರು, ಆರ್ಯವೈಶ್ಯ ಸಂಘಟನೆಯ ಪ್ರಮುಖರು, ಬಂಧುಮಿತ್ರರು ಪಾಲ್ಗೊಂಡಿದ್ದರು.

## ವಿಕಲಚೇತನರಿಗೆ ಉಚಿತವಾಗಿ ಸಾಧನ ಸಲಕರಣೆಗಳ ಸಮರ್ಪಣೆ

» ಮೊದಲ ಪುಟದಿಂದ

ದೇಶದ ಒಬ್ಬೊಬ್ಬ ವ್ಯಕ್ತಿಯಲ್ಲಿನ ಮಾನವ ಸಂಪನ್ಮೂಲದ ಶಕ್ತಿಯನ್ನು ಹೆಚ್ಚಿಸುವ ಗುರಿಯೊಂದಿಗೆ ವಿಶೇಷಚೇತನರನ್ನು ಮುಖ್ಯವಾಹಿನಿಗೆ ತರುವನಿಟ್ಟಿನಲ್ಲಿ ಈ ಮಾನವ ಸಂಪನ್ಮೂಲವನ್ನು ದೇಶದ ಬೆಳವಣಿಗೆಗೆ ಅವರು ಕೂಡ ಪಾತ್ರರಾಗಬೇಕು ಎಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಅಡಿಪ್ ಯೋಜನೆ ರೂಪಿಸಿದೆ. ಈ ಯೋಜನೆಯಡಿ ವಿಕಲಚೇತನರ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಿ, ಅವರ ಅಂಗವಿಕಲತೆಯನ್ನು ಪರಿಶೀಲನೆ ಮಾಡಿ ಅವರ ಅವಶ್ಯಕತೆಗನುಗಣವಾಗಿ ಸಾಧನ ಸಲಕರಣೆಗಳನ್ನು ವಿತರಣೆ ಮಾಡಲಾಗುತ್ತಿದೆ. ಅಡಿಪ್ ಯೋಜನೆಯಡಿಯಲ್ಲಿ ಜಿಲ್ಲೆಯ ವಿಶೇಷಚೇತನರಿಗೆ ಎರಡನೇ ಬಾರಿಗೆ ಸಾಧನ ಸಲಕರಣೆಗಳನ್ನು ವಿತರಣೆ ಮಾಡಲಾಗುತ್ತಿದೆ. ಇದರಿಂದ ವಿಶೇಷಚೇತನರ ಜೀವನ ಬದಲಾವಣೆಗೆ ಕಾರಣವಾಗಲಿದೆ ಎಂದರು.

1017 ವಿಕಲಚೇತನ ಫಲಾನುಭವಿಗಳಿಗೆ 1.12 ಕೋಟಿ ಮೊತ್ತದ ಸಾಧನ ಸಲಕರಣೆಗಳ ವಿತರಣೆ: ಕೇಂದ್ರ ಸರ್ಕಾರದ ವಿಶೇಷ ಅಡಿಪ್ ಯೋಜನೆಯಡಿ ಜಿಲ್ಲೆಯ 1017 ವಿಕಲಚೇತನ ಫಲಾನುಭವಿಗಳಿಗೆ ರೂ.1,12,59,910 ಮೊತ್ತದ 2293 ವಿವಿಧ ಸಾಧನ ಸಲಕರಣೆಗಳನ್ನು ವಿತರಿಸಲಾಗುತ್ತಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದರು.

ಕೇಂದ್ರ ಸಚವರಾದ ಎ.ನಾರಾಯಣಸ್ವಾಮಿ ಅವರ ಸೂಚನೆ ಮೇರೆಗೆ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆಯ ಅಡಿಯಲ್ಲಿ ಅಡಿಪ್ ಯೋಜನೆಯ ಅನುಷ್ಠಾನ ಸಂಸ್ಥೆಯಾದ ಭಾರತದ ಕೃತಕ ಅಂಗಾಂಗ ಉತ್ಪಾದನಾ ನಿಗಮದವರು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಹಯೋಗದೊಂದಿಗೆ 2023ರ ಜುಲೈ ಮಾಹೆಯಲ್ಲಿ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ತಜ್ಞ ವೈದ್ಯರ ತಂಡದೊಂದಿಗೆ ವಿಕಲಚೇತನರಿಗೆ ವಿವಿಧ ಸಾಧನ ಸಲಕರಣೆಗಳ ಗುರುತಿಸುವಿಕೆ ಶಿಬಿರಗಳನ್ನು ಹಮ್ಮಿಕೊಂಡು, ಫಲಾನುಭವಿಗಳಿಗೆ ವಿವಿಧ ಸಾಧನ ಸಲಕರಣೆಗಳನ್ನು ವಿತರಿಸಲಾಗುತ್ತದೆ ಎಂದರು.

ಈ ಸಾಮಾಜಿಕ ಅಧಿಕಾರಿತಾ ಶಿಬಿರದಲ್ಲಿ 39 ಬ್ಯಾಟರಿಚಾಲಿತ ಯಾಂತ್ರೀಕೃತ ಸ್ಕೈಕಲ್ಸ್, 79 ಸಾದಾ ಕೈಚಾಲಿತ ಸ್ಕೈಕಲ್ಸ್, 226 ಗಾಲಿಕುರ್ಚಿಗಳು, 614 ಕಂಕುಳ ಊರುಗೋಲು, 11 ವಾಕಿಂಗ್ ಸ್ಟಿಕ್ಸ್, 1 ಬ್ರೈಲ್ ಕ್ಯಾನೆಸ್, 1 ಬ್ರೈಲ್ ಸ್ಲೇಟ್, ಅಂದರಿಗೆ 15 ಬ್ರೈಲ್‌ಕಿಟ್ಸ್, 69 ರೊಲೇಟರ್ಸ್, 850 ಶ್ರವಣ ಸಾಧನ, 80 ಸುಗಮ್ಯ ಕೇನ್ಸ್, 27 ಅಂಧರಿಗೆ ಸ್ಮಾರ್ಟ್‌ಪೋನ್, 224 ಪ್ರಾಸ್ಥೆಸಿಸ್ ಮತ್ತು ಕ್ಯಾಲಿಫರ್ಸ್ ಸೇರಿದಂತೆ ಒಟ್ಟು 2293 ಸಾಧನ ಸಲಕರಣೆಗಳನ್ನು ವಿಶೇಷಚೇತನರಿಗೆ ವಿತರಿಸಲಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ತಿಮ್ಮಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಅಲಿಂಕೋ ಹಿರಿಯ ವ್ಯವಸ್ಥಾಪಕ ಅಶೋಕ್ ಕುಮಾರ್ ಸೇರಿದಂತೆ ಫಲಾನುಭವಿಗಳು ಇದ್ದರು.

## ಹಣ ತರಲು ಒತ್ತಾಯಿಸಿ ಪ್ರತಿನಿತ್ಯ ಹಿಂಸೆ ನೀಡುತ್ತಿದ್ದ ಗಂಡನ ಮತ್ತು ಮನೆಯವರ ಕಾಟ ತಾಳದೆ ಸಾವಿಗೆ ಶರಣಾದ ಸತ್ಯಮ್ಮ : ಪೋಷಕರಿಂದ ಕೊಲೆ ಆರೋಪ

» ಚಳ್ಳಕೆರೆ

ಕುಡಿತದ ಚಟಕ್ಕೆ ಈಡಾಗಿದ್ದ ವ್ಯಕ್ತಿಯೊಬ್ಬ ತಾನು ಮಾಡಿದ ಸಾಲವನ್ನು ತೀರಿಸಲು ತನ್ನ ಹೆಂಡತಿಗೆ ನಿತ್ಯ ಚಿತ್ರಹಿಂಸೆ ನೀಡಿ ನಾನು ಮಾಡಿದ ಸಾಲವನ್ನು ನಿಮ್ಮ ತವರು ಮನೆಯವರು ಕೊಡಬೇಕು ಇಲ್ಲವಾದರೆ ಆಸ್ತಿ ಮಾರಾಟ ಮಾಡಲು ನೀನು ಸಹಿ ಹಾಕಬೇಕು ಇಲ್ಲವಾದರೆ ನಿನ್ನನ್ನು ಕೊಂದ ಬಿಡುತ್ತೇವೆಂದು ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ ನೊಂದ ಗೃಹಿಣಿ ಮನೆಯಲ್ಲೇ ನೇಣು ಹಾಕಿಕೊಂಡು ಸಾವನಪ್ಪಿದ್ದು ಸಾವಿನ ಬಗ್ಗೆ ಮೃತಳ ಪೋಷಕರು ಅನುಮಾನ ವ್ಯಕ್ತಪಡಿಸಿ ಇದೊಂದು ಪೂರ್ವನಿಯೋಜಿತ ಕೊಲೆ ಎಂದು ದೂರು ನೀಡಿರುತ್ತಾರೆ.

ಬಳ್ಳಾರಿ ಜಿಲ್ಲೆಯ ಸಿರಿಗುಪ್ಪ ತಾಲ್ಲೂಕಿನ ದಾಸಾಪುರ ಗ್ರಾಮದ ಜಡಪ್ಪ(45) ಪೊಲೀಸರಿಗೆ ದೂರು ನೀಡಿದ್ದು, ನನ್ನ ಮಗಳು ಸತ್ಯಮ್ಮ(26)ಳನ್ನು ಚಳ್ಳಕೆರೆಯ ದಿವಂಗತ ಏಕನಾಥತೆಲಗಿ ಪತ್ನಿ ಸುಶೀಲಮ್ಮ ತೆಲಗಿಯ ಹಿರಿಯ ಪುತ್ರ ಪ್ರಜ್ವಲ್ ತೆಲಗಿಗೆ ಹಣ ಹಾಗೂ ಬಂಗಾರ ಆಭರಣ ನೀಡಿ ಕಳೆದ 2020ರಲ್ಲಿ ನಾಯಕನಹಟ್ಟಿಯಲ್ಲಿ ಮದುವೆ ಮಾಡಿಕೊಟ್ಟಿದ್ದೇವು. ಕೆಲವು ತಿಂಗಳು ಮಾತ್ರ ನನ್ನ ಮಗಳು ಸತ್ಯಮ್ಮಳನ್ನು ಚನ್ನಾಗಿ ನೋಡಿಕೊಂಡ ಪ್ರಜ್ವಲ್ ಮತ್ತು ಕುಟುಂಬದವರು ತಾನು ಮಾಡಿದ ಸಾಲಕ್ಕೆ ನಿಮ್ಮ ತಂದೆಯವರಿಂದ ಹೆಚ್ಚಿನ ಹಣ ತರಿಸಿಕೊಂಡು ನೀವು ವರದಕ್ಷಣೆಯನ್ನು ಕಡಿಮೆ ಕೊಟ್ಟಿದ್ದೀರ, ಆಸ್ತಿಯನ್ನು ಮಾರಾಟ ಮಾಡಲು ಸಹಿ ಹಾಕು ಇಲ್ಲವಾದರೆ ನಿನ್ನನ್ನು ಕೊಂದಾದರೂ ಆಸ್ತಿ ಮಾರಾಟ ಮಾಡುತ್ತೇವೆಂದು ಬೆದರಿಕೆ ಹಾಕಿ ಹಿಂಸೆ ಕೊಡುತ್ತಿದ್ದ ಬಗ್ಗೆ ಮೃತ ಸತ್ಯಮ್ಮ ಪೋಷಕರಿಗೆ ದೂರವಾಣಿಯಲ್ಲಿ ಮಾಹಿತಿ ನೀಡಿದ್ದಳು.

ಶುಕ್ರವಾರ ರಾತ್ರಿ ಸುಮಾರು 8.45ಕ್ಕೆ ತಂದೆಯೊಂದಿಗೆ ಮಾತನಾಡಿ, ನಾನು ಆಸ್ತಿ ಮಾರಲು ಸಹಿ ಹಾಕುವುದಿಲ್ಲ ಆಸ್ತಿ ಕಳೆದರೆ ನನ್ನ ಮತ್ತು ನನ್ನ ಮಗಳ ಗತಿ ಏನು ಎಂದು ಅಳುತ್ತ ಪರಿಸ್ಥಿತಿಯ ಬಗ್ಗೆ ಮಾತನಾಡಿದ್ದಳು. ಆದರೆ, 10.30ಕ್ಕೆ ನನ್ನ ಅಳಿಯ ಪ್ರಜ್ವಲ್ ತೆಲಗಿ ಸುಶೀಲಮ್ಮತೆಲಗಿ, ಪ್ರಶಾಂತ್ ತೆಲಗಿ ದೂರವಾಣಿಯಲ್ಲಿ ನಿಮ್ಮ ಮಗಳು ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆಂದು ತಿಳಿಸಿದ ಕೂಡಲೇ ನಾವು ಅಲ್ಲಿಂದ ಬಂದು ನೋಡಿದಾಗ ಮಗಳು ಸತ್ಯಮ್ಮ ಮೃತಪಟ್ಟಿದ್ದಳು.

**ಪ್ರಮುಖ ಸುದ್ದಿ**

# ರಾಜ್ಯದಾದ್ಯಂತ ಏಕ ಕಾಲಕ್ಕೆ ಜನತಾ ದರ್ಶನ ಇಂದು

» ಮೊದಲ ಪುಟದಿಂದ

"ಜಾತಿ ಪ್ರಮಾಣಪತ್ರ, ಖಾತೆ ಬದಲಾವಣೆ, ಟ್ರಾನ್ಸ್ ಫಾರ್ಮರ್ ರಿಪೇರಿ, ವಿದ್ಯುತ್ ಕಂಬ ಅಳವಡಿಕೆಯಂತಹ ಸಣ್ಣ ಪುಟ್ಟ ಕೆಲಸಗಳಿಗೂ ಜನ ನನ್ನ ಬಳಿಗೆ ಬರುತ್ತಿದ್ದಾರೆ. ನಾನು ಜಿಲ್ಲೆಗಳಿಗೆ ಭೇಟಿ ನೀಡಿದಾಗ ಜನರು ಇಷ್ಟು ಸಣ್ಣ ಪುಟ್ಟ ಕೆಲಸಗಳಿಗೂ ನನ್ನನ್ನು ಹುಡುಕಿಕೊಂಡು ಬರುವಂತಾಗಿದೆ ಎಂದರೆ ನೀವುಗಳಿದ್ದೂ ಏನು ಪ್ರಯೋಜನ ಎಂದು ಸಭೆಯಲ್ಲಿ ಪ್ರಶ್ನಿಸಿದ್ದರು. ಬಳಿಕ ಪ್ರತಿ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲೂ ಜನತಾ ದರ್ಶನ ನಡೆಸಬೇಕು ಎನ್ನುವ ಸೂಚನೆಯನ್ನೂ ನೀಡಿದ್ದರು.

ಈ ಸೂಚನೆಯ ಫಲವೇ ಸೆ.25ರ ನಾಳೆ ರಾಜ್ಯದಾದ್ಯಂತ ಏಕ ಕಾಲಕ್ಕೆ ನಡೆಯಲಿರುವ "ಜನತಾ ದರ್ಶನ" ಕಾರ್ಯಕ್ರಮ. ಇದು ನಿಗದಿತವಾಗಿ ನಡೆಯಲಿದೆ.



**ಸ್ವರೂಪ ಏನು?:** ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾಪಂಚಾಯ್ತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ರಕ್ಷಣಾಧಿಕಾರಿಗಳು ಜಿಲ್ಲಾ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ ಜನತಾ ದರ್ಶನ ನಡೆಸುತ್ತಾರೆ. ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುತ್ತಾರೆ. ಇವರೆಲ್ಲರ ನಡುವೆ ಸಮನ್ವಯ ಸಾಧಿಸಿ ಜನತಾ ದರ್ಶನ ಅರ್ಥಪೂರ್ಣವಾಗಿ ಮತ್ತು ಫಲಪ್ರದವಾಗುವಂತೆ ನೋಡಿಕೊಳ್ಳುವ ಜವಾಬ್ದಾರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾಗಿ ನೇಮಕಗೊಂಡಿರುವ ಹಿರಿಯ ಐಎಎಸ್ ಅಧಿಕಾರಿಗಳ ಮೇಲೆ ಇರುತ್ತದೆ.

ಪ್ರತಿ ಜಿಲ್ಲೆಯಲ್ಲೂ ಜನತಾ ದರ್ಶನ ನಡೆಯುವ, ನಡೆಸುವ ಬಗ್ಗೆ ಸಾರ್ವಜನಿಕರಿಗೆ ಈಗಾಗಲೇ ತಿಳಿವಳಿಕೆ ನೀಡಲಾಗಿದೆ. ನಿಗದಿತ ಸ್ಥಳದಲ್ಲಿ ನಿಗದಿತ ಸಮಯಕ್ಕೆ ಸರಿಯಾಗಿ ಜನತಾ ದರ್ಶನ ಆರಂಭವಾಗಬೇಕು ಎನ್ನುವ ಸೂಚನೆ ಸರ್ಕಾರದ ಕಡೆಯಿಂದ ಹೋಗಿದೆ. ಇಲ್ಲಿ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು. ಈ ಅಹವಾಲುಗಳಿಗೆ ಸಾಧ್ಯವಾದಷ್ಟು ಸ್ಥಳದಲ್ಲೇ ಪರಿಹಾರ ಒದಗಿಸುವುದು ಪ್ರಥಮ ಆದ್ಯತೆಯಾಗಿರುತ್ತದೆ. ತಾಂತ್ರಿಕ ಕಾರಣಗಳಿಂದ ಇದು ಸಾಧ್ಯವಾಗದಿದ್ದರೆ ಸಾರ್ವಜನಿಕರ ಅಹವಾಲುಗಳು ಸ್ಥಳದಲ್ಲೇ ದಾಖಲಾಗಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ವರ್ಗಾವಣೆಗೊಳ್ಳುತ್ತವೆ. ಎಲ್ಲದಕ್ಕೂ ಕಾಲ ಮಿತಿಯಲ್ಲಿ ಪರಿಹಾರ ಒದಗಿಸುವ ಮತ್ತು ಸಾರ್ವಜನಿಕರು ನೀಡಿದ ಅಹವಾಲಿನ ಸ್ಥಿತಿಗತಿಯನ್ನು ಅರ್ಜಿದಾರರಿಗೆ ಮನವರಿಕೆ ಮಾಡಿಸುವ ಜವಾಬ್ದಾರಿ ಕೂಡ ಜಿಲ್ಲಾಡಳಿತದ ಮೇಲೆ ಇರುತ್ತದೆ.

**ಸಾರ್ವಜನಿಕರ ಅಹವಾಲು ಎಲ್ಲಿ ದಾಖಲಾಗುತ್ತವೆ?:** ಜನತಾ ದರ್ಶನದಲ್ಲಿ ಸಲ್ಲಿಕೆಯಾಗುವ ಸಾರ್ವಜನಿಕರ ಅಹವಾಲುಗಳು ಈಗಾಗಲೇ ಚಾಲ್ತಿಯಲ್ಲಿರುವ "ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ (ಐಪಿಜಿಆರ್‌ಎಸ್–ಇಂಟೆಗ್ರೇಟೆಡ್ ಪಬ್ಲಿಕ್ ಗ್ರಿವಿಯೆನ್ಸ್ ರಿಡ್ರೆಸಲ್ ಸಿಸ್ಟಂ) ತಂತ್ರಾಂಶದಲ್ಲಿ ದಾಖಲಾಗುತ್ತದೆ ಮತ್ತು ಇಲ್ಲಿಂದಲೇ ಸಂಬಂಧಪಟ್ಟ ಇಲಾಖೆಯ ಟೇಬಲ್ಲಿಗೆ ಅರ್ಜಿಗಳ ವಿಲೇವಾರಿಯೂ ನಡೆಯುತ್ತದೆ. ಬಳಿಕ ಕಾಳಜಿ ವಹಿಸಿ ಕಾಲಮಿತಿಯಲ್ಲಿ ಪರಿಹಾರ ಒದಗಿಸಲು ಕ್ರಮ ವಹಿಸಬೇಕು ಎನ್ನುವ ಸೂಚನೆ ಈಗಾಗಲೇ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ರವಾನೆಯಾಗಿದೆ.

**ತಾಲ್ಲೂಕು ಮಟ್ಟದ ಜನತಾ ದರ್ಶನ:** ನಾಳೆ ಇಡಿ ರಾಜ್ಯಾದ್ಯಂತ ಜಿಲ್ಲಾ ಮಟ್ಟದ ಜನತಾ ದರ್ಶನ ಸಭೆ ನಡೆದ ಬೆನ್ನಲ್ಲೇ ಪ್ರತಿ ಹದಿನೈದು ದಿನಗಳಿಗೆ ಒಮ್ಮೆ ಜಿಲ್ಲಾಧಿಕಾರಿಗಳು ಒಂದು ತಾಲ್ಲೂಕನ್ನು ಆರಿಸಿಕೊಂಡು ತಾಲ್ಲೂಕು ಮಟ್ಟದ ಜನತಾ ದರ್ಶನ ಸಭೆ ನಡೆಸಬೇಕು ಎನ್ನುವ ಆದೇಶವನ್ನೂ ಈಗಾಗಲೇ ಮುಖ್ಯಮಂತ್ರಿಗಳ ಸೂಚನೆಯಂತೆ, ಅಪರ ಮುಖ್ಯ ಕಾರ್ಯದರ್ಶಿ ಆಗಿರುವ ರಜನೀಶ್ ಗೋಯಲ್ ಅವರು ಹೊರಡಿಸಿದ್ದಾರೆ.

**ಪರಿಣಾಮ:** ಸಾರ್ವಜನಿಕರು ಪದೇ ಪದೇ ಸಣ್ಣ ಪುಟ್ಟ ಕೆಲಸಗಳಿಗೂ ಸರ್ಕಾರಿ ಕಚೇರಿಗಳಿಗೆ, ಶಾಸಕರ, ಜಿಲ್ಲಾ ಮಂತ್ರಿಗಳ, ಮುಖ್ಯಮಂತ್ರಿಗಳ ಬಳಿಗೆ ಅಲೆಯುವುದು ತಪ್ಪುತ್ತದೆ. ಅರ್ಜಿದಾರರ ದೂರು ಸತ್ಯವಾಗಿದ್ದು, ಯಾವುದೇ ದುರುದ್ದೇಶದಿಂದ ಕೂಡಿರದಿದ್ದರೆ ಅಂತಹ ಅರ್ಜಿಗಳಿಗೆ ಸೂಕ್ತ ಪರಿಹಾರ ಒದಗಿಸದಿದ್ದರೆ ಸಂಬಂಧಪಟ್ಟ ಅಧಿಕಾರಿಯನ್ನು ಇದಕ್ಕೆ ಹೊಣೆಗಾರರನ್ನಾಗಿಸಿ ಸರ್ಕಾರ ಕ್ರಮ ಜರುಗಿಸಲಿದೆ.

ಹೀಗೆ...ರಾಜ್ಯದ ಇತಿಹಾಸದಲ್ಲೇ ಮೊದಲ ಬಾರಿಗೆ ಇಡಿ ರಾಜ್ಯದಾದ್ಯಂತ ಏಕ ಕಾಲಕ್ಕೆ ಒಂದೇ ದಿನ ಜನತಾ ದರ್ಶನ ದಾಖಲಾಗುತ್ತಿದೆ.

## ಫಾಸ್ಟ್ ನ್ಯೂಸ್

### ವಿದ್ಯಾರ್ಥಿಗಳಿಂದ ಪ್ರೋತ್ಸಾಹಧನಕ್ಕಾಗಿ ಅರ್ಜಿ

ದಾವಣಗೆರೆ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಬಿ.ಇಡಿ ಹಾಗೂ ಡಿ.ಇಡಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಗ್ರಾಮೀಣ ಮತ್ತು ನಗರ ಭಾಗದಲ್ಲಿ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ, ಬೌದ್ಧ, ಸಿಖ್ ಮತ್ತು ಪಾರ್ಸಿ ಸಮುದಾಯದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ವಿದ್ಯಾಭ್ಯಾಸ ಮುಂದುವರೆಸಲು ಪ್ರೋತ್ಸಾಹಧನ ಧನ ನೀಡಲಾಗುತ್ತಿದೆ. ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ ಎಜುಕೇಷನ್ ಮತ್ತು ಡಿಪಾರ್ಟಮೆಂಟ್ ಆಫ್ ಎಜುಕೇಷನಲ್ ರಿಸರ್ಚ್ ಅಂಟ್ ಟ್ರೈನಿಂಗ್ ಮಾನ್ಯತೆ ಪಡೆದಿರುವ ಸರ್ಕಾರಿ, ಅರೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ ಹಾಗೂ ಡಿ.ಎಡ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರಬೇಕು. ಅರ್ಹ ಮತ್ತು ಆಸಕ್ತ ವಿದ್ಯಾರ್ಥಿಗಳು ಸೆಪ್ಟೆಂಬರ್ 30 ರೊಳಗಾಗಿ ಸೇವಾ ಸಿಂಧು ಪೋರ್ಟಲ್ https://Sevasindhu.Karnataka.gov.in ಮೂಲಕ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಇಲಾಖೆ ಸ. ಸಂ. 8277799990, ಕಚೇರಿ ದೂ. ಸಂ. 08192 250022 ಸಂಪರ್ಕಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಮಲ್ಲಿಕಾರ್ಜುನ್ ಮಠದ್ ತಿಳಿಸಿದ್ದಾರೆ.

### ವಿಕಲಚೇತನ ವಿದ್ಯಾರ್ಥಿವೇತನಕ್ಕೆ ಅರ್ಜಿ

ದಾವಣಗೆರೆ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2023–24ನೇ ಸಾಲಿನಲ್ಲಿ ಪ್ರೀ ಮೆಟ್ರಿಕ್ ತರಗತಿಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಜಿಲ್ಲೆಯ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

URL for Fresh application: https://ssp.karnataka.gov.in/ssp2324/homenew.aspx & URL for Renewal application: https://ssp.karnataka.gov.in/ssp2324/signin.aspx ವೆಬ್‌ಸೈಟ್ ನಲ್ಲಿ ನೋಂದಣಿ ಮಾಡಿಕೊಂಡು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರಾದ ಬಿ.ಚನ್ನಪ್ಪ 9590829024(ದಾವಣಗೆರೆ), ಶೈಲಜಾ ಕೆ.ಎಂ.–9886366809(ಹೊನ್ನಾಳಿ), ಸುಬ್ರಮಣ್ಯ ಕೆ–9945738141 (ಚನ್ನಗಿರಿ), ಶಿವನಗೌಡ ಎಂ.ಕೆ–9902105734(ಜಗಳೂರು), ಶಶಿಕಲಾ ಟಿ–9945458058(ಹರಿಹರ) ಇವರನ್ನು ಸಂಪರ್ಕಿಸಲು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ. ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

### ಡಾ.ಬಿ.ಆರ್ ಅಂಬೇಡ್ಕರ್ ಅನುಯಾಯಿಗಳಿಗೆ ದೀಕ್ಷಾಭೂಮಿಗೆ ತೆರಳಲು ಅರ್ಜಿ ಆಹ್ವಾನ

ದಾವಣಗೆರೆ:ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿ ಯಾತ್ರೆಗೆ ತೆರಳಲು ಡಾ.ಬಿ.ಆರ್ ಅಂಬೇಡ್ಕರ್ ಅನುಯಾಯಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಅಕ್ಟೋಬರ್ 10 ರೊಳಗಾಗಿ ವೆಬ್‌ಸೈಟ್ https://sw.kar.nic.in ನಲ್ಲಿ ನೊಂದಣಿ ಮಾಡಿಕೊಂಡು ಸ್ವೀಕೃತಿ ಹಾಗೂ ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿಯನ್ನು ಸಂಪರ್ಕಿಸಿ.

### ಆಕಾಶವಾಣಿಯಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಕುರಿತು ಉಪನ್ಯಾಸ

ದಾವಣಗೆರೆ; ಸೆ. 22 (ಕರ್ನಾಟಕ ವಾರ್ತೆ) : ಆಕಾಶವಾಣಿ ಭದ್ರಾವತಿ ಹಾಗೂ ಕುವೆಂಪು ವಿಶ್ವವಿದ್ಯಾನಿಲಯದ ಡಾ. ಬಿ.ಆರ್ ಅಂಬೇಡ್ಕರ್ ಅಧ್ಯಯನ ಕೇಂದ್ರದ ಸಹಯೋಗದಲ್ಲಿ ಸೆಪ್ಟೆಂಬರ್ 26ರಿಂದ ಪ್ರತಿ ಮಂಗಳವಾರ ಬೆಳಿಗ್ಗೆ 7.15 ಗಂಟೆಗೆ ವಿಶ್ವಜ್ಞಾನಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಜೀವನ ಮತ್ತು ಸಾಧನೆ ಕುರಿತು ವಿಶೇಷ ಉಪನ್ಯಾಸ ಪ್ರಸಾರವಾಗಲಿದೆ. ಕುವೆಂಪು ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು, ವಿಷಯ ತಜ್ಞರು 15 ನಿಮಿಷಗಳ ಕಾಲ ಉಪನ್ಯಾಸ ನೀಡಲಿದ್ದು, ಪ್ರತಿ ಕಾರ್ಯಕ್ರಮದ ಕೊನೆಯಲ್ಲಿ ಪ್ರಶ್ನೆಯನ್ನು ಕೇಳಲಾಗುವುದು, ಇದಕ್ಕೆ ಸರಿ ಉತ್ತರ ನೀಡಿದವರಿಗೆ ಬಹುಮಾನ ನೀಡಿ ಪುರಸ್ಕರಿಸಲಾಗುತ್ತದೆ. ಉತ್ತರವನ್ನು ಆಕಾಶವಾಣಿ ಭದ್ರಾವತಿ ಕೇಂದ್ರ ಅಥವಾ ನಿಲಯ ವಾಟ್ಸಪ್ ಸಂಖ್ಯೆ 9481572600 ಗೆ ಕಳುಹಿಸಬೇಕು.

ಕಾರ್ಯಕ್ರಮವು ಭದ್ರಾವತಿ ಆಕಾಶವಾಣಿಯ ಈಒ103.5 ಹಾಗೂ ಒಫ675ಞಚ ನಲ್ಲಿ ಹಾಗೂ ವಿಶ್ವದಾದ್ಯಂತ prasarabharati newsonair app ನಲ್ಲಿ ಭದ್ರಾವತಿ ಕೇಂದ್ರದ ಮೂಲಕ ಪ್ರಸಾರ ಸಮಯದಲ್ಲಿ ಹಾಗೂ ಪ್ರಸಾರ ನಂತರ ಆಕಾಶವಾಣಿ ಭದ್ರಾವತಿ ಯುಟ್ಯೂಬ್ ಚಾನೆಲ್ ನಲ್ಲಿ ಕೇಳಬಹುದು.

# ಮಾದರಿ ಹಾಪ್‌ಕಾಮ್ಸ್‌ಗೆ ಸಚಿವರ ಭರವಸೆ

» ದಾವಣಗೆರೆ

ದಾವಣಗೆರೆ ಜಿಲ್ಲಾ ಹಾಪ್‌ಕಾಮ್ಸ್‌ನ್ನು ರಾಜ್ಯದಲ್ಲಿಯೇ ಮಾದರಿ ಸಹಕಾರಿ ಸಂಸ್ಥೆಯನ್ನಾಗಿ ಮಾಡುವ ಸಂಬಂಧ ಅಗತ್ಯ ಸಹಕಾರ ನೀಡುವಂತೆ ಸಲ್ಲಿಸಿರುವ ಮನವಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಈ ನಿಟ್ಟಿನಲ್ಲಿ ಕೆಲಸ ನಡೆಯುತ್ತಿದೆ ಎಂದು ಹಾಪ್‌ಕಾಮ್ಸ್ ಅಧ್ಯಕ್ಷ ಜೆ.ಆರ್.ಷಣ್ಮುಖಪ್ಪ ಹೇಳಿದರು.

ಅವರು, ಶನಿವಾರ ಪಿಬಿ ರಸ್ತೆಯಲ್ಲಿರುವ ಆಟೋಮೊಬೈಲ್ ಸೊಸೈಟಿಯಲ್ಲಿ ನಡೆದ ಜಿಲ್ಲಾ ತೋಟಗಾರಿಕೆ ಬೆಳೆಗಾರರ ಉತ್ಪನ್ನ ಮಾರಾಟ ಮತ್ತು ಸಂಸ್ಕರಣ ಸಹಕಾರ ಸಂಘ ನಿಯಮಿತ (ಜಿಲ್ಲಾ ಹಾಪ್ ಕಾಮ್ಸ್)ದ 2022 –23ನೇ ಸಾಲಿನ 16ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದಾವಣಗೆರೆಯ ಹಾಪ್‌ಕಾಮ್ ನ ಹೋಲ್‌ಸೇಲ್ ಮಾರುಕಟ್ಟೆಯಲ್ಲಿ ರೈತರಿಂದ ನೇರವಾಗಿ ಗ್ರಾಹಕರಿಗೆ ಉತ್ಪನ್ನಗಳನ್ನು ನೀಡಿ ಲಾಭಧಾಯಕವಾಗಿಸಲು ಈಗಿರುವ 8 ಮಳಿಗೆಗಳು ಸಾಲದು. ಅದಕ್ಕಾಗಿ ಕನಿಷ್ಠ 50 ಮಳಿಗೆಗಳಾದರೂ ಅವಶ್ಯವಿದೆ. ವಿನೋಬನಗರದಲ್ಲಿ ಜಾಗ ಕೇಳಲಾಗಿತ್ತು ಕೊಟ್ಟಿಲ್ಲ. 20*30 ಅಳತೆ ಜಾಗ ಕೊಟ್ಟರೆ ಒಳ್ಳೇ ಮಳಿಗೆ ಮಾಡಬಹುದು. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರ ಬಳಿ ದೂಡಾ ಅಥವಾ ನಗರ ಪಾಲಿಕೆ ವ್ಯಾಪ್ತಿಯಲ್ಲಿನ ಜಾಗ ನೀಡುವಂತೆ ಮನವಿ ಮಾಡಲಾಗಿದ್ದು, ಸಚಿವರಿಂದ ಸಾಕಾರಾತ್ಮಕ ಸ್ಪಂದನೆ ಸಿಕ್ಕಿದೆ ಎಂದರು.



**ಜಾಗ ಸಿಕ್ಕರೆ ರೈತರ ಮೆಗಾ ಮಾರ್ಕೆಟ್ :** ಬೆಂಗಳೂರು,ಮೈಸೂರು,ಹಾಸನ,ಕೊಡಗು ಈ ಜಿಲ್ಲೆಗಳಲ್ಲಿ ಮೆಗಾ ಮಾರ್ಕೆಟ್‌ಗಳು ಯಶಸ್ವಿಯಾಗಿ ನಡೆಯುತ್ತಿವೆ. ಅಲ್ಲಿ ಹಣ್ಣು, ತರಕಾರಿ ಸೇರಿದಂತೆ ರೈತರಿಗೆ ಅವಶ್ಯಕ ಕೃಷಿ ಉಪಕರಣಗಳು ಸಿಗುವ ವ್ಯವಸ್ಥೆ ಇದೆ. ಅಂತೆಯೇ ದಾವಣಗೆರೆಯಲ್ಲೂ 100*100 ಅಡಿ ಜಾಗ ಸಿಕ್ಕರೆ ಮೆಗಾ ಮಾರ್ಕೆಟ್ ಆರಂಭಿಸುವ ಚಿಂತನೆ ಇದೆ ಎಂದು ಹೇಳಿದರು.

ನಗರದ ಎಪಿಎಂಸಿ ಯಾರ್ಡ್ ನಲ್ಲಿ ತೋಟಗಾರಿಕೆ ಇಲಾಖೆಗೆ 11 ಎಕರೆಗೂ ಹೆಚ್ಚು ಜಾಗ ನೀಡಲಾಗಿದೆ.ಆದರೆ ಹಾಪ್ ಕಾಮ್ಸ್ ಕೇವಲ 15 ಸಾವಿರ ಚದರಡಿ ನೀಡಲಾಗಿದೆ. ಈ ಜಾಗ ಸಾಲುತ್ತಿಲ್ಲ. ಇನ್ನು ಸ್ವಲ್ಪ ಜಾಗ ಸಿಕ್ಕರೆ ಕೇರಳ ಮಾದರಿಯಲ್ಲಿ ಎಳನೀರು ಸಂಸ್ಕರಣಾ ಶೇಖರಣೆ ಮತ್ತು ಪ್ಯಾಕಿಂಗ್ ಹಾಗೂ ಜಾಮ್ ತಯಾರಿಕಾ ಮತ್ತು ಸಂಸ್ಕರಣ ಘಟಕವನ್ನು ಸ್ಥಾಪಿಸಬಹುದಾಗಿದೆ. ಮೊದಲು ತಾಲೂಕುವಾರು ನಂತರ ಹೋಬಳಿ ಮಟ್ಟದಲ್ಲಿ ಇದನ್ನ ಸ್ಥಾಪಿಸಬಹುದಾಗಿದೆ. ಸಮಾಜ ಕಲ್ಯಾಣ ಇಲಾಖೆ, ಮಕ್ಕಳ ಕ್ಷೇಮಾಭಿವೃದ್ಧಿ ಇಲಾಖೆ ಸೇರಿದಂತೆ ಆಸ್ಪತ್ರೆಗಳಿಗೆ ಹಣ್ಣು ತರಕಾರಿಗಳನ್ನು ಸುಲಭವಾಗಿ ಸರಬರಾಜು ಮಾಡಲು ಅನುಕೂಲವಾಗುತ್ತದೆ. ಹಾಪ್ ಕಾಮ್ಸ್ ನಲ್ಲಿರುವ ಜಿ–4 ವ್ಯವಸ್ಥೆಯಲ್ಲಿ ರೈತರ ಉತ್ಪನ್ನಗಳನ್ನು ಟೆಂಡರ್ ಪ್ರಕ್ರಿಯೆ ಮೂಲಕ ಖರೀದಿಸಬೇಕು. ಅದೇ ನಮಗೆ ಜಿ–ಹೆಚ್ ವ್ಯವಸ್ಥೆಯಿಂದ ರೈತರಿಂದ ನೇರವಾಗಿ ಉತ್ಪನ್ನಗಳು ನಮಗೆ ದೊರೆಯಲು ಸಾಧ್ಯವಾಗುತ್ತದೆ. ಈ ವ್ಯವಸ್ಥೆ ಜಾರಿಗೆ ಬಂದರೆ ಸೂಕ್ತ ಎಂದರು.ಎಲ್ಲಾ ಸಹಕಾರಿಗಳಲ್ಲೂ ಆರೋಗ್ಯಪೂರ್ಣ ಪೈಪೋಟಿ ಇದ್ದರೆ ಸಹಕಾರಿ ರಂಗವು ಉತ್ತಮ ಬೆಳವಣಿಗೆ ಕಾಣಲು ಸಾಧ್ಯ. ಆದರೆ ಮಧ್ಯ ಕರ್ನಾಟಕ ದಾವಣಗೆರೆ ಸೇರಿದಂತೆ ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ ಈ ಭಾಗಗಳಲ್ಲಿ ಇತರೆ ಸಹಕಾರ ಸೊಸೈಟಿಗಳಿಗೆ ಆರೋಗ್ಯಪೂರ್ಣ ಪೈಪೋಟಿ ನೀಡುವ ಬದಲಿಗೆ ಆ ಸೊಸೈಟಿಗಳ ಹಾಳು ಮಾಡಬೇಕೆಂಬ ಕೆಡಕು ಭಾವನೆ ಬಹುತೇಕರಲ್ಲಿ ಇದೆ. ಖಾಲಿ ಸೊಸೈಟಿ ಇದ್ದರೂ ಬೆಳವಣಿಗೆ ಸಹಿಸಲಾಗದೇ ಸೊಸೈಟಿ ವಿರುದ್ಧ ವಿನಾಕಾರಣ ಅರ್ಜಿ ಹಾಕುವುದು, ಗಲಾಟೆ ಮಾಡುವುದು ಒಳ್ಳೆಯ ಬೆಳವಣಿಗೆ ಅಲ್ಲ. ಇದು ಸಹಕಾರ ರಂಗಕ್ಕೂ ಪೆಟ್ಟು ಸಹ ಆಗಲಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಮಂಗಳೂರು ಸೇರಿದಂತೆ ದಕ್ಷಿಣ ಕನ್ನಡ ಭಾಗಗಳಲ್ಲಿ ಬೆಳೆಯುವ ಸೊಸೈಟಿಗಳಂತೆ ತಾವೂ ಉತ್ತಮವಾಗಿ ಸೊಸೈಟಿ ಕಟ್ಟಬೇಕೆಂಬ ಆರೋಗ್ಯಪೂರ್ಣ ಪೈಪೋಟಿ ಇದೆ. ಹಾಗಾಗಿ ಟೀಕೆ ಮತ್ತು ಕೆಡಕನ್ನು ಉಂಟು ಮಾಡುವ ಭಾವನೆ ದೂರವಾಗಿ ಆರೋಗ್ಯಪೂರ್ಣ, ಪ್ರೇರಕ ಭಾವನೆ ಎಲ್ಲಾ ಸಹಕಾರಿಗಳಲ್ಲೂ ಮೂಡಿದಾಗ ಸಹಕಾರಿ ಕ್ಷೇತ್ರದ ಬೆಳವಣಿಗೆಯಲ್ಲಿ ಮಹತ್ವದ ಸಾಧನೆ ಕಾಣಲು ಸಾಧ್ಯ ಎಂದು ಆಶಿಸಿದರು.

2008ರಲ್ಲಿ ನಾವು ಸಹಕಾರ ಸಂಘ ಕಟ್ಟಿ ಬೆಳೆಸಿದ್ದೇವೆ. ಸಂಘ ಕಟ್ಟಿ ಬೆಳೆಸುವುದು ಕಷ್ಟದ ಕೆಲಸ. ಆದರೆ ಈ ಬಗ್ಗೆ ಟೀಕೆ ಸುಲಭ. ಇಡೀ ರಾಜ್ಯದಲ್ಲಿ ದಾವಣಗೆರೆ ಹಾಪ್ ಕಾಮ್ಸ್ ಅನ್ನು ಉನ್ನತವಾಗಿ ಬೆಳೆಸಲಾಗಿದೆ. ಸಂಸ್ಥೆ ನಮಗೇನು ಕೊಟ್ಟಿದೆ ಎಂಬುದಕ್ಕಿಂತ ನಾವೇನು ಕೊಟ್ಟಿದ್ದೀವೆ ಎಂಬ ಭಾವನೆ ಬೇಕು. ನಮ್ಮ ಅವಧಿಯಲ್ಲಿ ಹಣ್ಣು, ತರಕಾರಿ ವ್ಯಾಪಾರಸ್ಥರಿಗೆ ಗಾಡಿಗಳ ಕೊಡಿಸಿದ್ದೇವೆ. ರೈತರಿಗೆ ಗೊಬ್ಬರ, ಔಷಧಿಗೆ ಹಣ ಕೊಡಿಸಿದ್ದೇವೆ. ರೈತರ ಮನವೊಲಿಸಿ ಸಾಲ ಮರುಪಾವತಿಗೆ ಒತ್ತು ನೀಡಲಾಗಿದೆ ಎಂದು ತಿಳಿಸಿದರು.

ಶಿರಸಿಯಲ್ಲಿನ ತೋಟಗಾರ್ಸ್ ಸಹಕಾರ ಸೊಸೈಟಿಯಿಂದ ರೈತರಿಗೆ ಅವಶ್ಯಕ ರಸಗೊಬ್ಬರ, ಯಂತ್ರೋಪಕರಣಗಳು, ಬೆಳೆಸಾಲ, ಬಂಗಾರ ಅಡಮಾನ ಸಾಲ, ಕಡಿಮೆ ದರದಲ್ಲಿ ಉಗ್ರಾಣಗಳು, ಕೊಬ್ಬರಿ, ಶೇಂಗಾ ಗಾಣಕ್ಕೆ ಪ್ರೋತ್ಸಾಹ ಇದೆ. ಇವುಗಳನ್ನು ಸ್ವತಹ ವೀಕ್ಷಿಸಿದ್ದೇನೆ. ಈ ರೀತಿಯಾಗಿ ಸಹಕಾರ ಸೊಸೈಟಿಗಳು ರೈತರಿಗೆ ಸಹಕಾರ ನೀಡಬೇಕು ಎಂದರು.

ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಎಸ್.ಹೆಚ್.ರವೀಂದ್ರನಾಥ,ನಿರ್ದೇಶಕರುಗಳಾದ ಬೇತೂರು ರಾಜಣ್ಣ, ಜಿ.ಎಂ.ರುದ್ರಗೌಡ, ಜೆ.ಎಸ್. ಶಿವಮೂರ್ತಿ, ಎಸ್.ಜಿ. ಮಧುಗೌಡ, ಜಿ.ಟಿ. ಶಿವಕುಮಾರ್, ಬಿ.ಎಸ್.ನಾಗನಗೌಡ, ಜಿ.ಎನ್. ವೀಣಾ, ರೇಷ್ಮಾ, ವಿ.ಆರ್. ರಂಗಪ್ಪ, ವೈ. ಲೋಕೇಶ್, ಬಿ. ಚಂದ್ರನಾಯ್ಕ, ಕೆ. ರೇವಣಸಿದ್ದಪ್ಪ, ವೃತ್ತಿಪರ ನಿರ್ದೇಶಕ ಹೆಚ್.ಜಿ. ಶಂಕರಮೂರ್ತಿ ಸೇರಿದಂತೆ ಇತರರು ಇದ್ದರು. ಹಾಪ್‌ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕ ಎಸ್.ಬಿ.ವಿಶ್ವನಾಥ್, ಸಿಇಒ ರೇಣುಕಾ ಪಾಟೀಲ್ ಉಪಸ್ಥಿತರಿದ್ದರು.

# ಮೇಕದಾಟು ಅಣೆಕಟ್ಟು ಕಾವೇರಿ ಸಮಸ್ಯೆಗೆ ಪರಿಹಾರ

» ಮೊದಲ ಪುಟದಿಂದ

ಕಾವೇರಿ ನದಿ ನೀರು ಹಂಚಿಕೆ ವಿಷಯದಲ್ಲಿ ರಾಜ್ಯ ಸರ್ಕಾರ ಸಂಕಷ್ಟಕ್ಕೆ ಸಿಲುಕಿದೆ. ನೀರು ಇಲ್ಲದ ಸಂದರ್ಭದಲ್ಲಿ ಸುಪ್ರಿಂ ಕೋರ್ಟ್ ಆದೇಶ ನಮಗೆ ಉರುಳಾಗಿದೆ. ಸರ್ಕಾರ ರಾಜ್ಯದ ರೈತರ ಹಿತ ಕಾಯಲು ಬದ್ಧವಾಗಿದೆ. ಮೇಕೆದಾಟು ಯೋಜನೆಯಿಂದ 67 ಟಿಎಂಸಿ ನೀರು ರಾಜ್ಯದಲ್ಲಿ ಸಂಗ್ರಹವಾಗಲಿದೆ. ಸುಪ್ರಿಂ ಕೋರ್ಟ್ ಸಹ ಮೇಕೆದಾಟು ಯೋಜನೆಗೆ ಜಾರಿಗೆ ಸಲಹೆ ನೀಡಿದೆ. ತಮಿಳುನಾಡು ಸಹ ಹೆಚ್ಚುವರಿ ನೀರು ಸಂಗ್ರಹಿಸಲು ಸಹ ಮೆಟ್ಟೂರು ಬಳಿ ಇನ್ನೊಂದು ಅಣೆಕಟ್ಟು ನಿರ್ಮಿಸಬಹುದು. ಇದರಿಂದ ಹೆಚ್ಚು ಮಳೆಯಾದ ಸಂದರ್ಭದಲ್ಲಿ ನೀರುವ ಸಂಗ್ರಹಿಸಿ, ಬರಗಾಲ ಸಂದರ್ಭದಲ್ಲಿ ಉಪಯೋಗಿಸಬಹುದು. ಇದರಿಂದ ಕಾವೇರಿ ಸಮಸ್ಯೆಗೆ ಪರಿಹಾರಕ್ಕೆ ದೊರಕಲಿದೆ ಎಂದು ಅಭಿಪ್ರಾಯಪಟ್ಟರು.

ಈ ದಿನ ಶ್ರೇಷ್ಠವಾದದ್ದು, ಹಲವಾರು ಬಾರಿ ಸಿರಿಗೆರೆ ಮಠಕ್ಕೆ ಆಗಮಿಸಿದ್ದೇನೆ. ಕೇಂದ್ರದಲ್ಲಿ ಹೆದ್ದಾರಿ ಸಚಿವನಿದ್ದಾಗ ಮಠಕ್ಕೆ ಸಂಪರ್ಕಿಸುವ ರಸ್ತೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಮಹಾದ್ವಾರ ನಿರ್ಮಿಸಲು ಅನುಮತಿ ನೀಡಿದ್ದನ್ನು ಸ್ವಾಮೀಜಿಗಳು ನೆಪಿಸಿಕೊಂಡರು. ಸಿರಿಗರೆ ಮಠ

ಬಸವಣ್ಣ ಚಿಂತನೆಯನ್ನು ಅಕ್ಷರ ಸಹ ಅನುಸರಿಸುತ್ತಿರ ಕ್ರಾಂತಿಕಾರ ಮಠವಾಗಿದೆ. ಲಿಂಗಕ್ಯ ಶಿವಕುಮಾರ ಶಿವಾಚಾರ್ಯ ಸ್ವಾಮಿಗಳು ಬಸವಣ್ಣ ತತ್ವದ ಹಾಗೇ ಸಮಾಜದ ಎಲ್ಲಾ ಜನರ ಉದ್ಧಾರಕ್ಕೆ ಶ್ರಮಿಸಿದರು. 850 ವರ್ಷಗಳ ಇತಿಹಾಸ ಇರುವ ಶ್ರೀ ಮಠ, ಇಂದಿಗೂ 12 ಶತಮಾನದ ಪರಂಪರೆ ಉಳಿಸಿಕೊಂಡು ಬಂದಿದೆ. ಚಿಕ್ಕಂದಿನಲ್ಲಿ ಓದುವಾಗ ಬುದ್ಧ ಬಸವಣ್ಣ ಅಂಬೇಡ್ಕರ್, ಗಾಂಧಿ ತ್ಯಾಗವನ್ನು ನೆನದು ರೋಮಾಂಚನಗೊಂಡಿದ್ದೆ. ಬಸವಣ್ಣ 12ನೇ ಶತಮಾನದಲ್ಲಿ ಸಮಾನತೆಯ ತತ್ವವನ್ನು ಪ್ರತಿಪಾದಿಸಿದ್ದರು. ಸ್ವತಂತ್ರ ಪೂರ್ವದಲ್ಲಿ ಶಾಲೆಗಳನ್ನು ತೆರದು ಸಮಾಜದ ಎಲ್ಲಾ ವರ್ಗದ ಮಕ್ಕಳಿಗೆ ಶಿಕ್ಷಣವನ್ನು ಶ್ರೀಮಠ ನೀಡಿದೆ. ಈ ಭಾಗದಲ್ಲಿ ನೀರಾವರಿ ಕೆಲಸ ಕೈಗೊಳ್ಳಲು ಸ್ವಾಮೀಜಿಗಳು ಮಾಡಿದ ಕಾರ್ಯ ಇತಿಹಾಸ ಪುಟದಲ್ಲಿ ಸ್ಮರಣೀಯವಾಗಿದೆ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಹಾಗೂ ಜಲಸಂಪನ್ಮೂಲ ಸಚಿವ ಎಂ.ಬಿ.ಪಾಟೀಲ ಭದ್ರಾ ಮೇಲ್ದಂಡೆ ಯೋಜನೆಗೆ ಅನುದಾನ ಒದಗಿಸಿದರು. ಈಗಲೂ ಸರ್ಕಾರ ಕುಡಿಯುವ ನೀರಿನ ಯೋಜನೆಗಳ ಜಾರಿಗೆ ಬದ್ಧವಿದೆ. ಎತ್ತಿನ ಹೊಳೆ ಯೋಜನೆ ಈ ವರ್ಷವೇ ಪೂರ್ಣಗೊಳ್ಳಲಿದೆ. ರಾಜ್ಯ ಸರ್ಕಾರ ನೀರಾವರಿ ವಿಚಾರದಲ್ಲಿ ಸಿರಿಗೆರೆ ಶಿವಮೂರ್ತಿ ಸ್ವಾಮೀಜಿಗಳ ಪ್ರೇರಣೆಯಾಗಿ ಸ್ವೀಕರಿಸಿ ಕೆಲಸ ನಿರ್ವಹಿಸಲಿದೆ. ಸ್ವಾಮೀಜಿಗಳ ಕೋರಿಕೆಯಂತೆ ಮಠದ ದಾಸೋಹಕ್ಕೆ ಕಾರ್ಯಕ್ಕೆ ರಾಜ್ಯ ಸರ್ಕಾರದಿಂದ ದವಸ ಧಾನ್ಯಗಳನ್ನು ನೀಡಲಾಗುವುದು ಎಂದರು.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣುಪ್ರಕಾಶ್ ಪಾಟೀಲ್ ಮಾತನಾಡಿ, ವಿಶೇಷವಾಗಿ ಪರಮಪೂಜ್ಯ ಶಿವಕುಮಾರ ಶಿವಾಚಾರ್ಯ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ನಾವೆಲ್ಲಾ ಭಕ್ತಿಯಿಂದ ಪಾಲ್ಗೊಂಡಿದ್ದೇವೆ. ನಾಡಿಗೆ 12ನೇ ಶತಮಾನದ ಶರಣರ ಕೊಡುಗೆ ಅಪಾರ. ಕರ್ನಾಟಕ ರಾಜ್ಯ ಶಾಂತಿ ಹಾಗೂ ಸಮೃದ್ಧಿಯಿಂದ ನೆಲೆಸಿರಲು ಕಲ್ಯಾಣದ ಮಹಾಕ್ರಾಂತಿ ಕಾರಣ. ಮನುಷ್ಯ ಜೀವನಕ್ಕೆ ವಚನಗಳ ಮೂಲಕ ಶಿವಶರಣರು ದಾರಿ ದೀಪ ತೋರಿದ್ದಾರೆ. ಜಾತಿ ವ್ಯವಸ್ಥೆ ವಿರುದ್ಧವಾಗಿ ಹೋರಾಡಿ ಸಮಾನತೆ ಮೂಡಿಸಿದ್ದಾರೆ. ಬಸವಾದಿ ಶರಣರ ತತ್ವಾದರ್ಶಗಳ ಅಳವಡಿಸಿಕೊಂಡು ಸಿರಿಗೆರೆ ಮಠದ ಶ್ರೀಗಳು ಸಮಾಜ ಸೇವೆ ಮುಂದುವರೆಸಿದ್ದಾರೆ. ಸಮಾಜದ ಕಟ್ಟಕಡೆಯ ವ್ಯಕ್ತಿಯ ಬದುಕಿಗೆ ಶಿಕ್ಷಣ ಮುಖ್ಯ. ತರಳಬಾಳು ಸಂಸ್ಥೆ 250 ಶೈಕ್ಷಣಿಕ ಸಂಸ್ಥೆಗಳ ಮೂಲಕ ಈ ಆಶಯ ಈಡೇರಿಸಿದೆ. ಸರ್ಕಾರ ಮಾಡಬೇಕಾದ ಕೆಲಸವನ್ನು ಮಾಡುತ್ತಾ ಉತ್ತಮ ಶಿಕ್ಷಣ ನೀಡಿದ್ದಾರೆ. ಇದರಿಂದ ನಾಡಿನಲ್ಲಿ ಪ್ರಗತಿ ಕಂಡುಬಂದಿದೆ. ಸಮಾಜದ ಎಲ್ಲಾ ವರ್ಗಗಳನ್ನು ಅಪ್ಪಿಕೊಂಡು ಸೌಹಾರ್ದ ಬದುಕಿಗೆ ಸಿರಿಗೆರೆ ಶ್ರೀಗಳು ಮಾದರಿಯಾಗಿದ್ದಾರೆ. ಕಲ್ಯಾಣ ಕರ್ನಾಟಕ ಹಾಗೂ ಸಮೃದ್ಧ ಕರ್ನಾಟಕ ನಿರ್ಮಾಣ ಮಾಡುವಲ್ಲಿ ಎಲ್ಲರೂ ಶ್ರಮಿಸಬೇಕು ಎಂದರು.

ಪೂಜ್ಯ ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದರು.ಹೊಳಲ್ಕರೆ ಶಾಸಕ ಡಾ.ಎಂ.ಚಂದ್ರಪ್ಪ, ಚಿಕ್ಕಮಗಳೂರು ಶಾಸಕ ಹೆಚ್.ಡಿ.ತಿಮ್ಮಯ್ಯ, ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ, ಮಾಜಿ ಸಚಿವ ಆಂಜನೇಯ, ಮಾಜಿ ಸಂಸದ ಚಂದ್ರಪ್ಪ, ರೈತ ಹೋರಾಟಗರ ಬಸವರಾಜ ಶ್ರೀಮಠದ ಆಡಳಿತಾಧಿಕಾರಿಗಳಾದ ಎಸ್.ಬಿ.ರಂಗನಾಥ, ವಾವದೇವಪ್ಪ ಸೇರಿದಂತೆ ಮತ್ತಿತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಬ್ಲಾಕ್ ಬೆಲ್ಟ್ ಕರಾಟೆ ಸ್ಪರ್ಧೆ : ಶುಭಶ್ರೀ ರಾಜ್ಯಮಟ್ಟಕ್ಕೆ ಆಯ್ಕೆ



» ಚಳ್ಳಕೆರೆ

ಇತ್ತೀಚೆಗೆ ಚಿತ್ರದುರ್ಗದಲ್ಲಿ ಮುಕ್ತಾಯಗೊಂಡ ಬ್ಲಾಕ್ ಬೆಲ್ಟ್ ಕರಾಟೆ ಸ್ಪರ್ಧೆಯಲ್ಲಿ ನಗರದ ಜ್ಞಾನ ಸುರಭಿ ಪ್ರೌಢಶಾಲೆ(ಲಿಟ್ಲ್ ಪ್ಲವರ್ಸ್ ಆಂಗ್ಲ ಮಾಧ್ಯಮಿಕ ಪಬ್ಲಿಕ್ ಶಾಲೆ)ಯ 9ನೇ ತರಗತಿ ವಿದ್ಯಾರ್ಥಿನಿ ಶುಭಶ್ರೀ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗುವ ಮೂಲಕ ಶಾಲೆಗೆ ಕೀರ್ತಿತಂದಿದ್ದಾಳೆ. ರಾಜ್ಯಮಟ್ಟಕ್ಕೆ ಆಯ್ಕೆಯಾದ ಶುಭಶ್ರೀಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಮುಖ್ಯಶಿಕ್ಷಕರು ಪೋಷಕರಾದ ಇ.ರಂಗಸ್ವಾಮಿ, ಆರ್.ಜೆ.ಭಾರತಿ ಸಂತಸ ವ್ಯಕ್ತಪಡಿಸಿದ್ದು, ಟೀಮ್ ಮ್ಯಾನೇಜರ್ ಕೆ.ತಿಪ್ಪೇಸ್ವಾಮಿ, ತರಬೇತುದಾರ ರಂಗಸ್ವಾಮಿರವರನ್ನು ಅಭಿನಂದಿಸಿದ್ದಾರೆ.

## ಪ್ರಮುಖ ಸುದ್ದಿ

### ಸೆಪ್ಟೆಂಬರ್ 26 ರಿಂದ ಅಕ್ಟೋಬರ್ 25ರ ವರೆಗೆ 4ನೇ ಸುತ್ತಿನ ಕಾಲುಬಾಯಿ ರೋಗದ ವಿರುದ್ಧ ಲಸಿಕೆ ಅಭಿಯಾನ

# ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮ

» ದಾವಣಗೆರೆ

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 4 ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮವನ್ನು ಸೆಪ್ಟೆಂಬರ್ 26 ರಿಂದ ಬರುವ ಅಕ್ಟೋಬರ್ 25 ರ ವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದು ಯಾವುದೇ ಜಾನುವಾರು ಲಸಿಕೆಯಿಂದ ಬಿಟ್ಟು ಹೋಗದಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಲಸಿಕಾ ಅಭಿಯಾನದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಸಿದ್ಧತೆಗಳ ಪರಿಶೀಲನೆ ನಡೆಸಿದರು. 2019 ರ ಜಾನುವಾರು ಗಣತಿಯನ್ವಯ ಜಿಲ್ಲೆಯಲ್ಲಿ 329700 ಜಾನುವಾರುಗಳಿವೆ. ಜಾನುವಾರುಗಳಲ್ಲಿ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ಲಸಿಕೆ ಬಹಳ ಪ್ರಮುಖವಾಗಿರುತ್ತದೆ. ಕಾಲಮಿತಿಯಲ್ಲಿ ಎಲ್ಲಾ ಜಾನುವಾರುಗಳಿಗೆ ಲಸಿಕೆ ಲಭ್ಯವಾಗುವುದರಿಂದ ಜಾನುವಾರುಗಳಿಗೆ ಹರಡುವ ರೋಗಗಳು ನಿಯಂತ್ರಣದಲ್ಲಿರುತ್ತವೆ. ನೊಂದಾಯಿತ ಮತ್ತು ನೊಂದಾಯಿತವಲ್ಲದ ಎಲ್ಲಾ ಜಾನುವಾರುಗಳಿಗೂ ಲಸಿಕೆಯನ್ನು ಹಾಕಬೇಕು, ಅನಧಿಕೃತವಾಗಿ ಸಾಗಿಸುವ ಜಾನುವಾರುಗಳನ್ನು ವಶಪಡಿಸಿಕೊಂಡಾಗ ಅಂತಹ ರಾಸುಗಳಿಗೂ ಲಸಿಕೆ ಸಿಗುವಂತೆ ಮಾಡಬೇಕು ಮತ್ತು ಲಸಿಕೆ ಹಾಕುವಾಗ ಎಲ್ಲಾ ರೈತರಿಗೆ ವಿಶ್ವಾಸ ಮೂಡಿಸುವಂತೆ ಸೂಚನೆ ನೀಡಿದರು.



ಜಾನುವಾರು ಸಂಖ್ಯೆ ಹೆಚ್ಚಳಕ್ಕೆ ಕ್ರಮ ವಹಿಸಿ; ಜಿಲ್ಲೆಯಲ್ಲಿ ಜನಸಂಖ್ಯೆ ಸುಮಾರು 19 ಲಕ್ಷದಷ್ಟಿದ್ದು ಜಾನುವಾರುಗಳ ಸಂಖ್ಯೆ ಹಸು, ಎಮ್ಮೆ, ಕುರಿ, ಮೇಕೆ ಸೇರಿದಂತೆ ಸುಮಾರು 7 ಲಕ್ಷದಷ್ಟಿದೆ. ಜಾನುವಾರುಗಳ ಸಂಖ್ಯೆ ಹೆಚ್ಚಾದಷ್ಟು ನಮ್ಮ ಮಣ್ಣಿನ ಫಲವತ್ತತೆ ಹೆಚ್ಚಿ ಗುಣಮಟ್ಟ ಹೆಚ್ಚಿ ಜನರ ಆರೋಗ್ಯವು ಉತ್ತಮವಾಗಿರುತ್ತದೆ. ಆದ್ದರಿಂದ ಜನಸಂಖ್ಯೆ ಎಷ್ಟಿರುತ್ತದೆ, ಅದಕ್ಕಿಂತಲೂ ಹೆಚ್ಚು ಜಾನುವಾರುಗಳಿದ್ದಲ್ಲಿ ಉತ್ತಮ ಸ್ವಾಸ್ಥ್ಯ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ. ಜಾನುವಾರು ಸಾಕಾಣಿಕೆ ಹೆಚ್ಚಾದಂತೆ ಜನರ ಆದಾಯ ಮಟ್ಟವು ಹೆಚ್ಚಲಿದೆ. ಜಾನುವಾರು ಸಾಕಾಣಿಕೆಯಿಂದ ಜನರ ಆದಾಯದಲ್ಲಿ ಖಾತರಿ ಇರುತ್ತದೆ. ಈ ನಿಟ್ಟಿನಲ್ಲಿ ಜನರು ಕುರಿ, ಮೇಕೆ ಸಾಕಾಣಿಕೆ, ಹಸು, ಎಮ್ಮೆ ಸಾಕಾಣಿಕೆ ಸೇರಿದಂತೆ ಹೈನುಗಾರಿಕೆಯಲ್ಲಿ ಹೆಚ್ಚು ತೊಡಗಿಸುವುದರಿಂದ ಅವರ ಆದಾಯ ಮಟ್ಟವನ್ನು ಹೆಚ್ಚಿಸಿ ಜಿಲ್ಲೆಯ ಆರ್ಥಿಕಾಭಿವೃದ್ಧಿಗೆ ಕೈಜೋಡಿಸಿದಂತಾಗುತ್ತದೆ ಎಂದರು.

ಗಂಜಲು, ಸಗಣಿಯಿಂದ ಗೊಬ್ಬರ ತಯಾರಿಕೆಗೆ ಮುಂದಾಗಿ; ಜಾನುವಾರುಗಳ ಗಂಜಲು ಮತ್ತು ಸಗಣಿಯಿಂದ ಯೂರಿಯಾ ರೀತಿ ಗೊಬ್ಬರವನ್ನು ತಯಾರು ಮಾಡಿ ರೈತರಿಗೆ ನೀಡುವ ನಿಟ್ಟಿನಲ್ಲಿ ಸಂಶೋಧನೆ ಮಾಡಬೇಕು, ಇದರಿಂದ ರೈತರಿಗೆ ಹೆಚ್ಚು ಅನುಕೂಲವಾಗಲಿದೆ. ಯೂರಿಯಾ ರೀತಿ ಉತ್ಪಾದನೆ ಮಾಡಿ ರೈತರು ಸುಲಭವಾಗಿ ಜಮೀನುಗಳಲ್ಲಿ ಹಾಕುವಂತಹ ಪದ್ಧತಿಯಲ್ಲಿ ಉತ್ಪಾದನೆ ಮಾಡಿದಲ್ಲಿ ಹೆಚ್ಚು ಜನಪ್ರಿಯವಾಗಲಿದೆ ಎಂದರು.

ಸಭೆಯಲ್ಲಿ ಕಾಲುಬಾಯಿ ರೋಗದ ಕುರಿತಂತೆ ಮಾಹಿತಿಯುಳ್ಳ ಪೋಸ್ಟರ್ ಮತ್ತು ಕರಪತ್ರವನ್ನು ಬಿಡುಗಡೆ ಮಾಡಲಾಯಿತು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ಡಾ; ಚಂದ್ರಶೇಖರ್ ಸುಂಕದ್ ಹಾಗೂ ವಿವಿಧ ತಾಲ್ಲೂಕುಗಳ ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕರು ಸಭೆಯಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T